ಮಾನ್ವಿ: ಪಟ್ಟಣದ ಶ್ರೀ ನಗರೇಶ್ವರ ಸ್ವಾಮಿ ಹಾಗೂ ವಾಸವಿ ಮಾತೆಯ ದೇವಸ್ಥಾನದಲ್ಲಿ ಶ್ರೀ ವಾಸವಿ ಅಮ್ಮನವರಿಗೆ ನವರಾತ್ರಿಯ ಅಂಗವಾಗಿ ನೋಟುಗಳಿಂದ ಅಲಂಕಾರವನ್ನು ಮಾಡಲಾಯಿತು.



## ಹರಿಜನವಾಡದ ಕುಮಾರಿ ಈರಮ್ಮ ಕಾಣೆ: ಪತ್ತೆಗೆ ಪೊಲೀಸರ ಮನವಿ



ರಾಯಚೂರು ಅ. 14 (ಕರ್ನಾಟಕ ವಾರ್ತೆ): ರಾಯಚೂರಿನ ಮಾರ್ಕೆಟ್ ಯಾರ್ಡ್ ಪೊಲೀಸ್ ಠಾಣೆಯ ವ್ಯಾಪ್ತಿಯ ಹರಿಜನವಾಡದ ಅಂಬೇಡ್ಕರ್ ನಗರದ ನಿವಾಸಿಯಾದ ಕುಮಾರಿ ಈರಮ್ಮ ತಂದೆ ಬೋಳಬಂಡಿ (27) ಎಂಬ ಯುವತಿ ಸೆಪ್ಟಂಬರ್ 01ರ ಮಧ್ಯಾಹ್ನ 3.30ಕ್ಕೆ ಮನೆಯಲ್ಲಿ ಬಿಟ್ಟಿದ್ದ ಚಪ್ಪಲಿ ಕಳೆದು ಹೋಗಿವೆ. ಯಾವುದೋ ನಾಯಿ ಎಳೆದುಕೊಂಡು ಹೋಗಿರಬೇಕು ಅಂತಾ ಮನೆಯಿಂದ ಹೊರಗಡೆ ಹೋದವಳು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ಠಾಣಾ ಗುನ್ನೆ ನಂ: 85/2026 ಕಲಂ ಮಹಿಳಾ ಕಾಣೆ ಅಡಿಯಲ್ಲಿ ಪ್ರಕರಣವನ್ನು ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ.

ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಮತ್ತು ನಗರದ ಪ್ರಮುಖ ಏರಿಯಾ ಸೇರಿದಂತೆ ಸಂಬಧಿಕರ ಮನೆಗಳಲ್ಲಿ ಮತ್ತು ಸಂಬಧಿಕರ ಊರುಗಳಲ್ಲಿ ವಿಚಾರಿಸಲಾಗಿದ್ದು, ಯಾವುದೇ ಸುಳಿವು ಸಿಗದೆ ಇದ್ದುದರಿಂದ ದಿನಾಂಕ:15.09.2026 ರಂದು ಠಾಣೆಗೆ ಬಂದು ಕಾಣೆಯಾದ ಯುವತಿಯ ತಾಯಿ ಲಕ್ಷ್ಮಿ ಅವರು ಠಾಣೆಯಲ್ಲಿ ದೂರು ನೀಡಿದ್ದಾರೆ.

ಕಾಣೆಯಾದ ಮಹಿಳೆಯ ಚಹರೆ ಪಟ್ಟಿ: ಉದ್ಯೋಗ ಕಾಯಿಪ್ಪಲ್ಲೆ ವ್ಯಾಪಾರ, 5 ಫೀಟ್ ಎತ್ತರ, ತೆಳ್ಳನೆಯ ಮೈಕಟ್ಟು, ಸಾದಾ ಎಣ್ಣೆಗೆಂಪು, ಕೋಲು ಮುಖವಿದ್ದು, ಬಾದಾಮಿ ಬಣ್ಣದ ಪಂಜಾಬಿ ಡ್ರೆಸ್ ಧರಿಸಿದ್ದು, ಕನ್ನಡ ಮತ್ತು ತೆಲುಗು ಭಾಷೆ ಮಾತನಾಡುತ್ತಾಳೆ.

ಸದರಿ ಚಹರೆ ಪಟ್ಟಿಯವರು ಹೋಲುವ ಯುವತಿ ಕಂಡು ಬಂದಲ್ಲಿ ಎಸ್.ಪಿ ರಾಯಚೂರು: 08532-235187, 9480803800, ಡಿ.ಎಸ್.ಪಿ ರಾಯಚೂರು: 08532-236338, 9480803820, ಸಿಪಿಐ ಪಶ್ಚಿಮ ವೃತ್ತ: 08532-226856, 9480803831, ಪಿ.ಎಸ್.ಐ ಮಾರ್ಕೆಟ್ ಯಾರ್ಡ ಠಾಣೆ 08532-235600, 9480803849ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಮಾರ್ಕೆಟ್ ಯಾರ್ಡ್ ಪೊಲೀಸ್ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್: ಅರ್ಜಿ ಆಹ್ವಾನ

ರಾಯಚೂರು ಅ. 14 (ಕರ್ನಾಟಕ ವಾರ್ತೆ): ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ದಿನಪತ್ರಿಕೆಗಳು/ಮಾಧ್ಯಮ ಸಂಸ್ಥೆಗಳಲ್ಲಿ ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತರಿಗೆ ತಿದ್ದುಪಡಿ ಮಾಡಲಾದ ಹೊಸ ಮಾರ್ಗಸೂಚಿಯನ್ವಯ ಉಚಿತ ಬಸ್ ಪಾಸ್ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಪತ್ರಕರ್ತರು ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳಲ್ಲಿ "ಪೂರ್ಣಾವಧಿ/ಅರೆಕಾಲಿಕ ವರದಿಗಾರರಾಗಿ ನೇಮಕವಾಗಿದ್ದಲ್ಲಿ ಆಯಾ ಮಾಧ್ಯಮ ಸಂಸ್ಥೆಯ ಸಂಪಾದಕರ / ಸ್ಥಾನಿಕ ಸಂಪಾದಕರ / ಮುಖ್ಯಸ್ಥರ ಶಿಫಾರಸ್ಸು ಪತ್ರ ಮತ್ತು ಸೇವಾ ಪ್ರಮಾಣ ಪತ್ರವನ್ನು ಲಗತ್ತಿಸಿ "ಸೇವಾ ಸಿಂಧು" ಪೋರ್ಟಲ್ https://sevasindhu.karnataka.gov.in ಮೂಲಕ ಸಮೀಪದ ಗ್ರಾಮ-1 ಕೇಂದ್ರದಲ್ಲಿ ಆನ್ ಲೈನ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.

ಈ ಹಿಂದೆ ಇದ್ದ ಮಾರ್ಗಸೂಚಿಯಲ್ಲಿ 11 ತಿಂಗಳ ವೇತನ ಪತ್ರ ಸಲ್ಲಿಸಬೇಕು ಎಂಬ ಷರತ್ತನ್ನು ಸಡಿಲಿಸಿ. ಆಯಾ ಮಾಧ್ಯಮ ಸಂಸ್ಥೆಯ ಸಂಪಾದಕರ, ಸ್ಥಾನಿಕ ಸಂಪಾದಕರ/ ಮುಖ್ಯಸ್ಥರ ಶಿಫಾರಸ್ಸು ಪತ್ರವನ್ನು ಪರಿಗಣಿಸಲು ಅವಕಾಶ ಕಲ್ಪಿಸಲಾಗಿದೆ.

ಆನ್ ಲೈನ್ ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಆಯಾ ಜಿಲ್ಲೆಯ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ. ತಾಲ್ಲೂಕು ಮಟ್ಟದ ಪತ್ರಕರ್ತರಿಗೆ ಸುದ್ದಿ ಸಂಗ್ರಹಿಸಲು ಅನುಕೂಲ ಕಲ್ಪಿಸಲು ಸರ್ಕಾರವು ವಾರ್ತಾ ಇಲಾಖೆಯ ಮೂಲಕ ಉಚಿತ ಬಸ್ ಪಾಸ್ ಗಳನ್ನು ನೀಡುತ್ತಿದೆ.

ರಾಜ್ಯದ ಎಲ್ಲಾ ತಾಲ್ಲೂಕುಗಳ ಅರ್ಹ ಪತ್ರಕರ್ತರು ಕೂಡಲೇ "ಸೇವಾಸಿಂಧು" ಪೋರ್ಟಲ್ ಮೂಲಕ ಗ್ರಾಮ-1 ಕೇಂದ್ರದ ಮೂಲಕ 2026 ರ ಅಕ್ಟೋಬರ್ 31 ರೊಳಗೆ ಅರ್ಜಿಗಳನ್ನು ಸಲ್ಲಿಸಬೇಕು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಎಂ.ಎಸ್.ಅನುಚೇತ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಅಮೃತ ವಾಣಿ**

**ಜೀವನಕ್ಕೆ ಜ್ಞಾನ ಮತ್ತು ಉತ್ತಮ ಓದುವ ಹವ್ಯಾಸ ಬೆಳೆಸಬೇಕು.**

**1616 ನೇಯ ದಿನಕ್ಕೆ ಏಮ್ಸ್ ಹೋರಾಟ**

# ಕರ್ನಾಟಕ ಕಲಾ ಮಂಡಲಂ ವತಿಯಿಂದ ನವರಾತ್ರಿ ನೃತ್ಯೋತ್ಸವ ಸಂಭ್ರಮ




ರಾಯಚೂರು, ಅ.14: ದುರ್ಗಾ ನವರಾತ್ರಿ ಉತ್ಸವದ ಅಂಗವಾಗಿ ನಗರದ ಕರ್ನಾಟಕ ಕಲಾ ಮಂಡಲಂ (ರಿ.) ವತಿಯಿಂದ ಆಯೋಜಿಸಿದ್ದ ನವರಾತ್ರಿ ನೃತ್ಯೋತ್ಸವ ಕಾರ್ಯಕ್ರಮವು ಶಾಸ್ತ್ರೀಯ ನೃತ್ಯಗಳ ವೈಭವದೊಂದಿಗೆ ಕಲಾರಸಿಕರ ಗಮನ ಸೆಳೆಯಿತು. ಕುಚಿಪುಡಿ ಹಾಗೂ ಭರತನಾಟ್ಯ ಪ್ರದರ್ಶನಗಳ ಮೂಲಕ ಕಲಾವಿದರು ಭಾರತೀಯ ಸಂಸ್ಕೃತಿ, ಪರಂಪರೆ ಮತ್ತು ನೃತ್ಯಕಲೆಯ ಸೊಬಗನ್ನು ಅನಾವರಣಗೊಳಿಸಿದರು.

ಕಾರ್ಯಕ್ರಮವನ್ನು ಕನ್ನಡ ಜಾನಪದ ಪರಿಷತ್ ರಾಯಚೂರಿನ ಪ್ರಧಾನ ಕಾರ್ಯದರ್ಶಿ ಡಾ. ಬಿ.ಎ. ಬಿರಾದಾರ ಉದ್ಘಾಟಿಸಿದರು. ಶಿಕ್ಷಕಿ ಸಂಧ್ಯಾ ಮನೋಜ್ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು.

ನವರಾತ್ರಿ ಉತ್ಸವದ ಸಂದರ್ಭದಲ್ಲಿ ಮಹಿಳಾ ಕಲಾವಿದರಿಗೆ ವಿಶೇಷ ವೇದಿಕೆ ಕಲ್ಪಿಸುವುದರ ಜೊತೆಗೆ ಉದಯೋನ್ಮುಖ ಕಲಾವಿದರನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಈ ನೃತ್ಯೋತ್ಸವವನ್ನು ಹಮ್ಮಿಕೊಳ್ಳಲಾಗಿತ್ತು. ಶಾಸ್ತ್ರೀಯ ನೃತ್ಯಕಲೆಯ ಬಗ್ಗೆ ಯುವಪೀಳಿಗೆಯಲ್ಲಿ ಆಸಕ್ತಿ ಮೂಡಿಸುವುದು ಹಾಗೂ ಸ್ಥಳೀಯ ಪ್ರತಿಭೆಗಳಿಗೆ ತಮ್ಮ ಕಲೆಯನ್ನು ಪ್ರದರ್ಶಿಸಲು ಅವಕಾಶ ಒದಗಿಸುವುದು ಕಾರ್ಯಕ್ರಮದ ಪ್ರಮುಖ ಆಶಯವಾಗಿತ್ತು.

ಗಣಪತಿ ಸ್ತುತಿಯೊಂದಿಗೆ ಆರಂಭವಾದ ನೃತ್ಯೋತ್ಸವದಲ್ಲಿ ಶಿಕ್ಷಕಿ ಸಂಧ್ಯಾ ಮನೋಜ್ ಅವರು ಪ್ರಸ್ತುತಪಡಿಸಿದ ಕುಚಿಪುಡಿ ನೃತ್ಯ ಪ್ರದರ್ಶನ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಯಿತು. ನೃತ್ಯದ ಲಯಬದ್ಧ ಹೆಜ್ಜೆಗಳು, ಭಾವಾಭಿನಯ ಹಾಗೂ ಆಕರ್ಷಕ ಹಸ್ತಮುದ್ರೆಗಳ ಮೂಲಕ ಅವರು ಶಾಸ್ತ್ರೀಯ ನೃತ್ಯದ ವೈಶಿಷ್ಟ್ಯವನ್ನು ಪ್ರದರ್ಶಿಸಿದರು.

ಬಳಿಕ ಕರ್ನಾಟಕ ಕಲಾ ಮಂಡಲಂನ ವಿದ್ಯಾರ್ಥಿಗಳು ಭರತನಾಟ್ಯ ಪ್ರದರ್ಶಿಸುವ ಮೂಲಕ ತಮ್ಮ ಕಲಾ ಪ್ರತಿಭೆಯನ್ನು ಅನಾವರಣಗೊಳಿಸಿದರು. ನೃತ್ಯದಲ್ಲಿ ವಿದ್ಯಾರ್ಥಿಗಳು ತೋರಿದ ಶಿಸ್ತು, ತಾಳಬದ್ಧತೆ, ಮುಖಭಾವ ಹಾಗೂ ಅಂಗಚಲನೆಗಳು ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿದವು. ನವರಾತ್ರಿ ಉತ್ಸವದ ಧಾರ್ಮಿಕ ಮತ್ತು ಸಾಂಸ್ಕೃತಿಕ ಮಹತ್ವವನ್ನು ಪ್ರತಿಬಿಂಬಿಸುವ ನೃತ್ಯ ಪ್ರದರ್ಶನಗಳು ನೆರೆದಿದ್ದ ಕಲಾಸಕ್ತರ ಗಮನ ಸೆಳೆದವು.

ಭಾರತೀಯ ಶಾಸ್ತ್ರೀಯ ನೃತ್ಯಗಳು ಕೇವಲ ಮನರಂಜನೆಯ ಮಾಧ್ಯಮವಾಗಿರದೆ, ದೇಶದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಪ್ರಮುಖ ಕಲಾಪ್ರಕಾರಗಳಾಗಿವೆ. ಇಂತಹ ಕಾರ್ಯಕ್ರಮಗಳು ಮಕ್ಕಳಲ್ಲಿ ಕಲಾಭಿರುಚಿ ಬೆಳೆಸುವುದರ ಜೊತೆಗೆ ಅವರಲ್ಲಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸಲು ಸಹಕಾರಿಯಾಗುತ್ತವೆ ಎಂಬ ಆಶಯದೊಂದಿಗೆ ನೃತ್ಯೋತ್ಸವವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಯಶಸ್ಸಿಗೆ ರಾಯಚೂರಿನ ಎಸ್.ಬಿ.ಎಚ್. ಕಾಲೋನಿಯ ಶ್ರೀ ಅಂಬಾ ಭವಾನಿ ಯುವಕ ಮಂಡಳಿಯ ಎಲ್ಲ ಪದಾಧಿಕಾರಿಗಳು ಸಹಕಾರ ನೀಡಿದರು. ಕರ್ನಾಟಕ ಕಲಾ ಮಂಡಲಂನ ವಿದ್ವಾನ್ ಮಂಜುನಾಥ್ ಗೋರ್ಕಲ್, ಶಿಕ್ಷಕಿ ಸಂಧ್ಯಾ ಮನೋಜ್ ಸೇರಿದಂತೆ ಕಲಾವಿದರು, ವಿದ್ಯಾರ್ಥಿಗಳು ಹಾಗೂ ಕಲಾಸಕ್ತರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಗಣಪತಿ ಸ್ತುತಿಯೊಂದಿಗೆ ಆರಂಭಗೊಂಡ ನೃತ್ಯೋತ್ಸವವು ಮಧ್ಯಮಾವತಿ ರಾಗ ಹಾಗೂ ಆದಿ ತಾಳದಲ್ಲಿ ಪ್ರಸ್ತುತಪಡಿಸಿದ ಮಂಗಳಂನೊಂದಿಗೆ ಮುಕ್ತಾಯಗೊಂಡಿತು. ನವರಾತ್ರಿ ಉತ್ಸವದ ಅಂಗವಾಗಿ ನಡೆದ ಈ ಸಾಂಸ್ಕೃತಿಕ ಕಾರ್ಯಕ್ರಮವು ಸ್ಥಳೀಯ ಕಲಾವಿದರ ಪ್ರತಿಭಾ ಪ್ರದರ್ಶನಕ್ಕೆ ಉತ್ತಮ ವೇದಿಕೆಯಾಯಿತು.

## ಜರ್ಮನಿಯಲ್ಲಿ ವಸತಿ ಕಟ್ಟಡಕ್ಕೆ ಬೆಂಕಿ: ಮೂವರು ಭಾರತೀಯರು ಸಾವು, ಐವರಿಗೆ ಗಾಯ




ಬೋಚಮ್: ಜರ್ಮನಿಯ ಬೋಚಮ್ ನಗರದಲ್ಲಿರುವ ವಸತಿ ಕಟ್ಟಡವೊಂದರಲ್ಲಿ ಮಂಗಳವಾರ ಮುಂಜಾನೆ ಸಂಭವಿಸಿದ ಭೀಕರ ಅಗ್ನಿ ಅವಘಡದಲ್ಲಿ ಮೂವರು ಭಾರತೀಯರು ಮೃತಪಟ್ಟಿದ್ದು, ಐವರು ಗಾಯಗೊಂಡಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಕೊಲೆ ಶಂಕೆಯ ಮೇರೆಗೆ 41 ವರ್ಷದ ರೊಮೇನಿಯಾ ಪ್ರಜೆಯೊಬ್ಬರನ್ನು ಪೊಲೀಸರು ಬಂಧಿಸಿದ್ದಾರೆ ಎಂದು ಸ್ಥಳೀಯ ಮಾಧ್ಯಮಗಳು ಬುಧವಾರ ವರದಿ ಮಾಡಿವೆ.

ಮೃತಪಟ್ಟವರಲ್ಲಿ 25 ಮತ್ತು 27 ವರ್ಷ ವಯಸ್ಸಿನ ಇಬ್ಬರು ಮಹಿಳೆಯರು ಹಾಗೂ 26 ವರ್ಷದ ಯುವಕ ಸೇರಿದ್ದಾರೆ. ಮೂವರೂ ಭಾರತೀಯ ಪ್ರಜೆಗಳಾಗಿದ್ದು, ಅವರ ಹೆಸರು ಹಾಗೂ ಭಾರತದ ಯಾವ ರಾಜ್ಯಕ್ಕೆ ಸೇರಿದವರು ಎಂಬ ವಿವರಗಳನ್ನು ಪೊಲೀಸರು ಇನ್ನೂ ಬಹಿರಂಗಪಡಿಸಿಲ್ಲ ಎಂದು ಜರ್ಮನಿಯ ಸಾರ್ವಜನಿಕ ಪ್ರಸಾರ ಸಂಸ್ಥೆ ಡಬ್ಲ್ಯೂಡಿಆರ್ (ಡಬ್ಲ್ಯೂ ಡಿ ಆ)ر ವರದಿ ಮಾಡಿದೆ.

ಮಂಗಳವಾರ ಸ್ಥಳೀಯ ಕಾಲಮಾನ ಬೆಳಗಿನ ಜಾವ ಸುಮಾರು 4.15ಕ್ಕೆ ಬೋಚಮ್ ನಗರದ ಹಾಫ್‌ಸ್ಟೆಡೆ ಜಿಲ್ಲೆಯ ಬಹುಕುಟುಂಬ ವಸತಿ ಕಟ್ಟಡದಲ್ಲಿ ಬೆಂಕಿ ಕಾಣಿಸಿಕೊಂಡಿದೆ. ವಿಷಯ ತಿಳಿದು ಸ್ಥಳಕ್ಕೆ ಧಾವಿಸಿದ ಅಗ್ನಿಶಾಮಕ ಸಿಬ್ಬಂದಿ ಬೆಂಕಿ ನಂದಿಸುವ ಕಾರ್ಯಾಚರಣೆ ನಡೆಸಿದ್ದಾರೆ. ಈ ವೇಳೆ ಕಟ್ಟಡದ ಎರಡನೇ ಮಹಡಿಯ ಅಪಾರ್ಟ್‌ಮೆಂಟ್ ನಲ್ಲಿ ಮೂವರ ಮೃತದೇಹಗಳು ಪತ್ತೆಯಾಗಿವೆ.

ಘಟನೆಯಲ್ಲಿ ಗಾಯಗೊಂಡ ಐವರನ್ನು ರಕ್ಷಿಸಲಾಗಿದ್ದು, ಅವರ ಆರೋಗ್ಯ ಸ್ಥಿತಿಯ ಕುರಿತು ಹೆಚ್ಚಿನ ಮಾಹಿತಿ ಲಭ್ಯವಾಗಿಲ್ಲ. ಅಗ್ನಿ ಅವಘಡದ ನಿಖರ ಕಾರಣ ಪತ್ತೆಹಚ್ಚಲು ಪೊಲೀಸರು ಹಾಗೂ ಅಗ್ನಿಶಾಮಕ ಇಲಾಖೆಯ ಅಧಿಕಾರಿಗಳು ತನಿಖೆ ಕೈಗೊಂಡಿದ್ದಾರೆ.

ಜರ್ಮನ್ ಪ್ರೆಸ್ ಏಜೆನ್ಸಿ (ಡಿಪಿಎ) ವರದಿಯ ಪ್ರಕಾರ, ಇದೇ ಕಟ್ಟಡದಲ್ಲಿ ವಾಸಿಸುತ್ತಿದ್ದ 41 ವರ್ಷದ ರೊಮೇನಿಯಾ ಪ್ರಜೆಯೊಬ್ಬರನ್ನು ಕೊಲೆ ಶಂಕೆಯ ಮೇರೆಗೆ ಬಂಧಿಸಲಾಗಿದೆ. ಪ್ರಕರಣದ ಕುರಿತು ಕೊಲೆ ತನಿಖಾ ದಳದ ಅಧಿಕಾರಿಗಳು ಶಂಕಿತ ವ್ಯಕ್ತಿಯನ್ನು ವಿಚಾರಣೆ ನಡೆಸಿದ್ದು, ಬುಧವಾರ ಬಂಧನದ ಮಾಹಿತಿಯನ್ನು ಅಧಿಕೃತವಾಗಿ ಪ್ರಕಟಿಸಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿರುವ ಬೋಚಮ್ ಪೊಲೀಸ್ ವಕ್ತಾರರು, ಘಟನೆಯನ್ನು ಕೊಲೆ ಪ್ರಕರಣವೆಂದು ಶಂಕಿಸಲು ಪ್ರಾಥಮಿಕ ಆಧಾರಗಳು ಲಭ್ಯವಾಗಿವೆ ಎಂದು ತಿಳಿಸಿದ್ದಾರೆ. ಕಟ್ಟಡಕ್ಕೆ ಉದ್ದೇಶಪೂರ್ವಕವಾಗಿ ಬೆಂಕಿ ಹಚ್ಚಿರುವ ಸಾಧ್ಯತೆಯ ಬಗ್ಗೆ ತನಿಖಾಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.

ಬೆಂಕಿ ಕಾಣಿಸಿಕೊಳ್ಳಲು ತಾಂತ್ರಿಕ ದೋಷ ಕಾರಣವಾಗಿರುವ ಸಾಧ್ಯತೆಯನ್ನು ತನಿಖಾಧಿಕಾರಿಗಳು ಪ್ರಾಥಮಿಕವಾಗಿ ತಳ್ಳಿಹಾಕಿದ್ದಾರೆ. ಆದಾಗ್ಯೂ, ಬೆಂಕಿ ಉದ್ದೇಶಪೂರ್ವಕವಾಗಿ ಹಚ್ಚಲಾಗಿದೆಯೇ ಅಥವಾ ಬೇರೆ ಕಾರಣದಿಂದ ಸಂಭವಿಸಿದೆಯೇ ಎಂಬುದು ತನಿಖೆಯಿಂದ ಸ್ಪಷ್ಟವಾಗಬೇಕಿದೆ.

ಘಟನೆಯಲ್ಲಿ ಮೃತಪಟ್ಟ ಮೂವರು ಭಾರತೀಯರ ಗುರುತು ಪತ್ತೆಹಚ್ಚುವ ಕಾರ್ಯ ಮುಂದುವರಿದಿದ್ದು, ಪ್ರಕರಣದ ಕುರಿತು ಜರ್ಮನಿ ಪೊಲೀಸರು ಹೆಚ್ಚಿನ ತನಿಖೆ ನಡೆಸುತ್ತಿದ್ದಾರೆ.

## ಮದರಕಲ್ ಮಠದ ಸ್ವಾಮಿ ವಿರುದ್ಧ ಕ್ರಮಕ್ಕೆ ಒತ್ತಾಯಿಸಿ ಅ.19ರಂದು ಪ್ರತಿಭಟನೆ

ನಡೆಸುವುದಾಗಿ ಅಧಿಕಾರಿಗಳು ಭರವಸೆ ನೀಡುತ್ತಿದ್ದಾರೆ. ಆದರೆ, ಭೂಮಿಯ ಅಳತೆ ಹಾಗೂ ಒತ್ತುವರಿ ತೆರವಿಗೆ ಸಂಬಂಧಿಸಿದಂತೆ ಯಾವುದೇ ಪರಿಣಾಮಕಾರಿ ಕ್ರಮ ಜರುಗಿಸಿಲ್ಲ ಎಂದು ದೂರಿದರು.

ಸರ್ಕಾರಿ ಭೂಮಿ ಸಾರ್ವಜನಿಕರ ಹಿತಕ್ಕಾಗಿ ಬಳಕೆಯಾಗಬೇಕು. ಭೂಮಿಯ ಒತ್ತುವರಿ ಆರೋಪವನ್ನು ಪರಿಶೀಲಿಸಿ ಅಕ್ರಮ ಸಾಬೀತಾದಲ್ಲಿ ಮಠವನ್ನು ತೆರವುಗೊಳಿಸಬೇಕು. ತೆರವುಗೊಳಿಸಿದ ಜಾಗವನ್ನು ನಿವೇಶನರಹಿತ ಬಡ ಕುಟುಂಬಗಳಿಗೆ ಹಂಚಿಕೆ ಮಾಡಲು ಕ್ರಮ ಕೈಗೊಳ್ಳಬೇಕು. ಜೊತೆಗೆ ನಾಮದೇವಗೌಡ ವಿರುದ್ಧದ ಆರೋಪಗಳ ಕುರಿತು ತನಿಖೆ ನಡೆಸಿ ತಪ್ಪಿತಸ್ಥರೆಂದು ಕಂಡುಬಂದಲ್ಲಿ ಕಾನೂನು ಕ್ರಮ ಜರುಗಿಸಬೇಕು ಹಾಗೂ ಅವರನ್ನು ಗ್ರಾಮದಿಂದ ಹೊರಹಾಕಬೇಕು ಎಂದು ಒತ್ತಾಯಿಸಿದರು.

ಈ ಎಲ್ಲ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಅಕ್ಟೋಬರ್ 19ರಂದು ಪಲಕನಮರಡಿ ಗ್ರಾಮ ಪಂಚಾಯಿತಿ ಎದುರು ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ನಬಿಸಾಬ್, ಹುಸೇನ್ ಸಾಬ್, ಬಂದಿಗಿ ಸಾಬ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

**ಮೊದಲನೇ ಪುಟದಿಂದ**

## ನೀಲಿ ಡ್ರಮ್‌ನಲ್ಲಿ ಶವ ಮುಚ್ಚಿಟ್ಟ ಪ್ರಕರಣ: ಪತ್ನಿ, ಪ್ರಿಯಕರನಿಗೆ ಮರಣದಂಡನೆ

ಮುಸ್ಕಾನ್ ಅವರ ಮೊಬೈಲ್ ಫೋನ್‌ನಿಂದ ಸಂಬಂಧಿಕರಿಗೆ ಸಂದೇಶಗಳನ್ನು ಕಳುಹಿಸಿದ್ದಳು. ಸೌರಭ್ ವ್ಯವಹಾರದ ನಿಮಿತ್ತ ಹೊರಗಡೆ ಪ್ರಯಾಣಿಸುತ್ತಿದ್ದಾರೆ ಎಂಬ ಭಾವನೆ ಮೂಡಿಸಲು ಈ ತಂತ್ರ ಅನುಸರಿಸಲಾಗಿತ್ತು ಎಂದು ತನಿಖಾಧಿಕಾರಿಗಳು ತಿಳಿಸಿದ್ದರು.

ಮಾರ್ಚ್ 17ರಂದು ಸೌರಭ್ ಅವರ ಸಂಬಂಧಿಕರಿಗೆ ಅನುಮಾನ ಮೂಡಿದ ಹಿನ್ನೆಲೆಯಲ್ಲಿ ಸ್ಥಳೀಯ ಅಧಿಕಾರಿಗಳೊಂದಿಗೆ ಮನೆಗೆ ಭೇಟಿ ನೀಡಿದ್ದರು. ಈ ವೇಳೆ ದಂಪತಿಯ ಆರು ವರ್ಷದ ಮಗಳು ತನ್ನ ತಂದೆ ಡ್ರಮ್ ನಲ್ಲಿದ್ದಾರೆ ಎಂದು ನೆರೆಹೊರೆಯವರಿಗೆ ತಿಳಿಸಿದ್ದಳು ಎನ್ನಲಾಗಿದೆ.

ಬಳಿಕ ಪೊಲೀಸರು ಮನೆಯಲ್ಲಿದ್ದ ನೀಲಿ ಡ್ರಮ್ ತೆರೆದು ಪರಿಶೀಲಿಸಿದಾಗ ಸೌರಭ್ ಅವರ ಮೃತದೇಹದ ಅವಶೇಷಗಳು ಪತ್ತೆಯಾಗಿದ್ದವು. ಪ್ರಕರಣ ಬೆಳಕಿಗೆ ಬಂದ ನಂತರ ಆರೋಪಿಗಳಿಗಾಗಿ ಶೋಧ ನಡೆಸಿದ ಪೊಲೀಸರು ಎರಡು ದಿನಗಳ ಬಳಿಕ ಮುಸ್ಕಾನ್ ಮತ್ತು ಸಾಹಿಲ್ ಅವರನ್ನು ಬಂಧಿಸಿದ್ದರು.

ವಿಚಾರಣೆ ಸಂದರ್ಭದಲ್ಲಿ ಪ್ರಾಸಿಕ್ಯೂಷನ್ ಹಲವು ಪ್ರಮುಖ ಸಾಕ್ಷ್ಯಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಿತ್ತು. ಕೊಲೆಗೆ ಮುನ್ನ ಆರೋಪಿಗಳು ನೀಲಿ ಪ್ಲಾಸ್ಟಿಕ್ ಡ್ರಮ್, ಸಿಮೆಂಟ್ ಚೀಲಗಳು, ಮರಳು, ಮಾಂಸ ಕತ್ತರಿಸುವ ಸಾಧನಗಳು ಹಾಗೂ ರೇಜರ್‌ಗಳನ್ನು ಖರೀದಿಸಿದ್ದರು ಎಂಬುದಕ್ಕೆ ಸ್ಥಳೀಯ ಅಂಗಡಿಕಾರರ ಹೇಳಿಕೆಗಳು ಸಾಕ್ಷಿಯಾಗಿದ್ದವು.

ಇದಲ್ಲದೆ, ಆರೋಪಿಗಳ ಮೊಬೈಲ್ ಕರೆಗಳ ವಿವರಗಳು ಹಾಗೂ ಟವರ್ ಲೊಕೇಷನ್ ದಾಖಲೆಗಳು ಕೊಲೆ ನಡೆದ ಸಂದರ್ಭದಲ್ಲಿ ಸಾಹಿಲ್ ಘಟನಾ ಸ್ಥಳದಲ್ಲಿದ್ದುದನ್ನು ಸೂಚಿಸಿದ್ದವು. ಕೊಲೆಯ ನಂತರ ಇಬ್ಬರೂ ಶಿಮ್ಲಾ ಮತ್ತು ಮನಾಲಿಯ ಹೋಟೆಲ್‌ಗಳಲ್ಲಿ ಒಟ್ಟಿಗೆ ತಂಗಿದ್ದ ಮಾಹಿತಿಯೂ ತನಿಖೆಯಲ್ಲಿ ಪತ್ತೆಯಾಗಿತ್ತು.

ಮರಣೋತ್ತರ ಪರೀಕ್ಷೆಯ ವರದಿಯಲ್ಲಿ ಸೌರಭ್ ಚೂರಿ ಇರಿತದಿಂದ ಮೃತಪಟ್ಟಿರುವುದು ದೃಢಪಟ್ಟಿತ್ತು. ಅಂಗಡಿಗಳ ಖರೀದಿ ದಾಖಲೆಗಳು, ಮೊಬೈಲ್ ಕರೆಗಳ ಮಾಹಿತಿ, ವೈದ್ಯಕೀಯ ವರದಿ ಹಾಗೂ ಇತರ ಸಾಂದರ್ಭಿಕ ಸಾಕ್ಷ್ಯಗಳನ್ನು ಪರಿಗಣಿಸಿದ ನ್ಯಾಯಾಲಯ, ಇಬ್ಬರ ವಿರುದ್ಧದ ಆರೋಪಗಳು ಸಾಬೀತಾಗಿವೆ ಎಂದು ತೀರ್ಮಾನಿಸಿ ಮರಣದಂಡನೆ ವಿಧಿಸಿದೆ.

ದೇಶಾದ್ಯಂತ ಗಮನ ಸೆಳೆದಿದ್ದ ನೀಲಿ ಡ್ರಮ್ ಕೊಲೆ ಪ್ರಕರಣದಲ್ಲಿ ನ್ಯಾಯಾಲಯ ನೀಡಿರುವ ಈ ತೀರ್ಪು ಮತ್ತೊಮ್ಮೆ ಸಾರ್ವಜನಿಕ ವಲಯದಲ್ಲಿ ಚರ್ಚೆಗೆ ಕಾರಣವಾಗಿದೆ.

## ಭೂ ದಾಖಲೆಗಳಲ್ಲಿ ವಿಸ್ತೀರ್ಣ ಹೆಚ್ಚಳ ಆರೋಪ: ಮೂಲ ದಾಖಲೆಗಳ ಪರಿಶೀಲನೆಗೆ ರೂಪಾ ಶ್ರೀನಿವಾಸ್ ನಾಯಕ ಒತ್ತಾಯ

ಗುಂಟೆಯಿಂದ 6 ಗುಂಟೆಗೆ ಹೆಚ್ಚಿಸಲಾಗಿದೆ. ಮೂಲ ಮಾರಾಟ ಪತ್ರದಲ್ಲಿ 4 ಗುಂಟೆ ಎಂದು ನಮೂದಾಗಿದ್ದರೂ ನಂತರದ ಕಂದಾಯ ದಾಖಲೆಗಳಲ್ಲಿ ಹೆಚ್ಚುವರಿ 2 ಗುಂಟೆ ಸೇರ್ಪಡೆಯಾಗಿರುವುದು ಹೇಗೆ ಎಂಬ ಪ್ರಶ್ನೆಗೆ ಸಂಬಂಧಪಟ್ಟ ಅಧಿಕಾರಿಗಳು ಸ್ಪಷ್ಟನೆ ನೀಡಬೇಕಾಗಿದೆ ಎಂದು ಆಗ್ರಹಿಸಿದರು.

ಈ ನಡುವೆ 2004ರ ಅಕ್ಟೋಬರ್ 20ರಂದು ನೋಂದಣಿ ದಾಖಲೆ ಸಂಖ್ಯೆ 2537/2004-05ರ ಮೂಲಕ ಸದರಿ ಜಮೀನನ್ನು ನವೋದಯ ಎಜುಕೇಶನ್ ಟ್ರಸ್ಟ್‌ನ ಮಾಲೀಕ ಎಸ್. ರಾಜೇಂದ್ರರೆಡ್ಡಿ ಅವರಿಗೆ ಮಾರಾಟ ಮಾಡಲಾಗಿದೆ. ಈ ಮಾರಾಟ ಪ್ರಕ್ರಿಯೆಗೂ ಮುನ್ನ ಹಾಗೂ ನಂತರ ಸಿದ್ಧಪಡಿಸಲಾದ ದಾಖಲೆಗಳನ್ನು ಪರಿಶೀಲಿಸಿದರೆ ಜಮೀನಿನ ವಿಸ್ತೀರ್ಣದಲ್ಲಿನ ವ್ಯತ್ಯಾಸಕ್ಕೆ ಸಂಬಂಧಿಸಿದ ವಾಸ್ತವಾಂಶಗಳು ಬೆಳಕಿಗೆ ಬರಬಹುದು ಎಂದು ಅಭಿಪ್ರಾಯಪಟ್ಟರು.

ಜಮೀನಿನ ಮೂಲ ಮಾಲೀಕರು ಪರಿಶಿಷ್ಟ ಜಾತಿಗೆ ಸೇರಿದ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳವರಾಗಿದ್ದು, ತಲೆಮಾರುಗಳಿಂದ ಕೃಷಿಯನ್ನೇ ಜೀವನಾಧಾರವಾಗಿ ಮಾಡಿಕೊಂಡು ಬಂದಿದ್ದಾರೆ. ಇಂತಹ ಕುಟುಂಬಗಳ ಆಸ್ತಿಗೆ ಸಂಬಂಧಿಸಿದ ದಾಖಲೆಗಳಲ್ಲಿ ಯಾವುದೇ ಬದಲಾವಣೆ ಮಾಡುವಾಗ ಕಂದಾಯ ಹಾಗೂ ಭೂ ದಾಖಲೆಗಳ ಇಲಾಖೆಯ ಅಧಿಕಾರಿಗಳು ಮೂಲ ದಾಖಲೆಗಳು, ನೋಂದಾಯಿತ ಮಾರಾಟ ಪತ್ರಗಳು ಮತ್ತು ಸರ್ವೆ ನಕ್ಷೆಗಳನ್ನು ಕೂಲಂಕಷವಾಗಿ ಪರಿಶೀಲಿಸಬೇಕಾಗಿತ್ತು. ಆದರೆ, ಈ ಪ್ರಕರಣದಲ್ಲಿ ಅಗತ್ಯ ಪರಿಶೀಲನೆ ನಡೆದಿಲ್ಲ ಎಂಬ ಅನುಮಾನ ವ್ಯಕ್ತವಾಗುತ್ತಿದೆ ಎಂದು ಹೇಳಿದರು.

ಜಮೀನಿನ ವಿಸ್ತೀರ್ಣದಲ್ಲಿ 2 ಗುಂಟೆ ಹೆಚ್ಚಳವಾಗಿರುವುದು ಕೇವಲ ದಾಖಲೆಗಳಲ್ಲಿನ ತಾಂತ್ರಿಕ ದೋಷವೇ ಅಥವಾ ಬೇರೆ ಕಾರಣಗಳಿಂದ ಈ ವ್ಯತ್ಯಾಸ ಸಂಭವಿಸಿದೆಯೇ ಎಂಬುದನ್ನು ಪತ್ತೆಹಚ್ಚುವುದು ಅಗತ್ಯವಾಗಿದೆ. ರಿಪೋಡಿ ಪ್ರಕ್ರಿಯೆಯಲ್ಲಿ ಅನುಸರಿಸಲಾದ ಕ್ರಮಗಳು, ಅಳತೆ ವಿವರಗಳು, ಫಾರಂ ನಂ. 10, ಸರ್ವೆ ನಕ್ಷೆ ಹಾಗೂ ಪಹಣಿ ದಾಖಲೆಗಳನ್ನು ಮೂಲ ಮಾರಾಟ ಪತ್ರಗಳೊಂದಿಗೆ ಹೋಲಿಸಿ ಪರಿಶೀಲಿಸಬೇಕು. ದಾಖಲೆಗಳನ್ನು ಸಿದ್ಧಪಡಿಸಿದ ಸಂದರ್ಭದಲ್ಲಿ ನಿಯಮಾನುಸಾರ ಕ್ರಮಗಳನ್ನು ಅನುಸರಿಸಲಾಗಿದೆಯೇ ಎಂಬುದನ್ನೂ ತನಿಖೆಗೆ ಒಳಪಡಿಸಬೇಕು ಎಂದು ಒತ್ತಾಯಿಸಿದರು.

ಪ್ರಸ್ತುತ ಪಹಣಿಯಲ್ಲಿ ಸರ್ವೆ ನಂ. 911/7ರ ಜಮೀನಿನ ವಿಸ್ತೀರ್ಣ 6 ಗುಂಟೆ ಎಂದು ದಾಖಲಾಗಿದ್ದು, ಮೂಲ ದಾಖಲೆಗಳ ಪರಿಶೀಲನೆಯಿಂದ ವಾಸ್ತವವಾಗಿ 4 ಗುಂಟೆ ಮಾತ್ರ ಇರುವುದು ದೃಢಪಟ್ಟಲ್ಲಿ ಪಹಣಿಯನ್ನು ತಕ್ಷಣ ತಿದ್ದುಪಡಿ ಮಾಡಬೇಕು. ಅಲ್ಲದೆ, ಫಾರಂ ನಂ. 10, ಸರ್ವೆ ನಕ್ಷೆ ಸೇರಿದಂತೆ ಇತರ ದಾಖಲೆಗಳಲ್ಲಿ ತಪ್ಪುಗಳು ಕಂಡುಬಂದರೆ ಅವುಗಳನ್ನು ಕಾನೂನು ಪ್ರಕಾರ ತಿದ್ದುಪಡಿ ಮಾಡಬೇಕು ಅಥವಾ ಅಗತ್ಯವಿದ್ದಲ್ಲಿ ರದ್ದುಗೊಳಿಸಬೇಕು ಎಂದು ಆಗ್ರಹಿಸಿದರು.

ಭೂಮಿಯ ಹಕ್ಕು ಮತ್ತು ಮಾಲೀಕತ್ವಕ್ಕೆ ಸಂಬಂಧಿಸಿದ ವಿಷಯಗಳಲ್ಲಿ ದಾಖಲೆಗಳ ನಿಖರತೆ ಅತ್ಯಂತ ಮುಖ್ಯವಾಗಿದೆ. ದಾಖಲೆಗಳಲ್ಲಿನ ಸಣ್ಣ ವ್ಯತ್ಯಾಸವೂ ಮುಂದಿನ ದಿನಗಳಲ್ಲಿ ಆಸ್ತಿ ವಿವಾದಗಳಿಗೆ ಕಾರಣವಾಗುವ ಸಾಧ್ಯತೆಯಿದೆ. ಆದ್ದರಿಂದ ಸಂಬಂಧಪಟ್ಟ ಇಲಾಖೆಯ ಹಿರಿಯ ಅಧಿಕಾರಿಗಳು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ, ನಿಷ್ಪಕ್ಷಪಾತ ತನಿಖೆ ನಡೆಸಬೇಕು. ಲೋಪಗಳು ದೃಢಪಟ್ಟಲ್ಲಿ ಅದಕ್ಕೆ ಕಾರಣರಾದವರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಂಡು, ಮೂಲ ಮಾಲೀಕರ ಹಿತಾಸಕ್ತಿಯನ್ನು ಕಾಪಾಡಬೇಕು ಎಂದು ರೂಪಾ ಶ್ರೀನಿವಾಸ್ ನಾಯಕ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ವಿಜಯಕುಮಾ್ರ, ತಾಯಮ್ಮ, ಕಸಮ್ಮ, ಜಂಬಲಮ್ಮ, ಬೇಬಿ, ಸವಾರಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಮಡಿವಾಳ ಮಾಚಿದೇವ ಸಮಾಜದ ಆಡಳಿತ ಮಂಡಳಿ ಆಯ್ಕೆಗೆ ಚುನಾವಣೆ ನಡೆಸಲು ಒತ್ತಾಯ

ಜರುಗಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ಅಕ್ಟೋಬರ್ 15ರಂದು ಸಮಾಜದ ರಾಜ್ಯಾಧ್ಯಕ್ಷ ಹಾಗೂ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದ ಅಧ್ಯಕ್ಷ ನಂಜಪ್ಪ ಸಿ. ಅವರ ಜನ್ಮದಿನದ ಪ್ರಯುಕ್ತ ಸಮುದಾಯ ಭವನದಲ್ಲಿ ಕುರ್ಕ್ಯ್ರ ಬೆಡ್‌ಶೀಟ್, ನೋಟ್ ಬುಕ್ ಸೇರಿದಂತೆ ವಿವಿಧ ವಸ್ತುಗಳನ್ನು ಉಚಿತವಾಗಿ ಹಂಚಿಕೆ ಮಾಡಲು ಸಿದ್ಧತೆ ನಡೆಸಲಾಗಿದೆ ಎಂದು ತಿಳಿಸಿದರು.

ಈಶಾನ್ಯ ಪದವೀಧರ ಕ್ಷೇತ್ರದ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವ ಹಿನ್ನೆಲೆಯಲ್ಲಿ ಉಚಿತ ಸಾಮಗ್ರಿಗಳ ವಿತರಣೆಯಂತಹ ಕಾರ್ಯಕ್ರಮಗಳು ಚುನಾವಣಾ ನಿಯಮಗಳಿಗೆ ವಿರುದ್ಧವಾಗುವ ಸಾಧ್ಯತೆಯಿದೆ. ಹೀಗಾಗಿ ಜಿಲ್ಲಾಡಳಿತ ಹಾಗೂ ಚುನಾವಣಾ ಅಧಿಕಾರಿಗಳು ಕಾರ್ಯಕ್ರಮದ ಉದ್ದೇಶ ಮತ್ತು ಸ್ವರೂಪವನ್ನು ಪರಿಶೀಲಿಸಬೇಕು ಎಂದು ಆಗ್ರಹಿಸಿದರು.

ಸಮಾಜದ ಆಡಳಿತದಲ್ಲಿ ಪಾರದರ್ಶಕತೆ ಕಾಪಾಡಲು ನಿಯಮಾನುಸಾರ ಚುನಾವಣೆ ನಡೆಸಬೇಕು. ಅಲ್ಲದೆ, ನೀತಿ ಸಂಹಿತೆ ಉಲ್ಲಂಘನೆ ಕಂಡುಬಂದಲ್ಲಿ ಉದ್ದೇಶಿತ ಸಾಮಗ್ರಿ ವಿತರಣಾ ಕಾರ್ಯಕ್ರಮವನ್ನು ರದ್ದುಗೊಳಿಸಿ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಎ. ಶಾಂತಪ್ಪ, ಹುಲಿಗೆಪ್ಪ, ಮಂಜುಳಾ, ಲಕ್ಷ್ಮಣ್ ಸೇರಿದಂತೆ ಸಮಾಜದ ಇತರ ಮುಖಂಡರು ಉಪಸ್ಥಿತರಿದ್ದರು.

## ಕಾಲುವೆ ಕೊನೆಯಂಚಿನ ರೈತರಿಗೆ ನೀರು ಪೂರೈಸಿ, ಸಾಲ ವಸೂಲಾತಿ ಕಿರುಕುಳ ತಪ್ಪಿಸಲು ಆಗ್ರಹ

ಕಲ್ಪಿಸಬೇಕು ಎಂದು ಆಗ್ರಹಿಸಿದರು.

ನೀರಿನ ಕೊರತೆಯಿಂದ ಬೆಳೆ ಹಾನಿಗೊಳಗಾಗಿರುವ ರೈತರು ಈಗಾಗಲೇ ಆರ್ಥಿಕ ಸಂಕಷ್ಟದಲ್ಲಿದ್ದಾರೆ. ಇಂತಹ ಸಂದರ್ಭದಲ್ಲಿ ಬ್ಯಾಂಕ್‌ಗಳು ಸಾಲ ಮರುಪಾವತಿಗೆ ನೋಟಿಸ್ ನೀಡುತ್ತಿರುವುದಲ್ಲದೆ, ಕೆಲವು ಪ್ರಕರಣಗಳಲ್ಲಿ ನ್ಯಾಯಾಲಯದ ಮೂಲಕ ವಸೂಲಾತಿಗೆ ಮುಂದಾಗಿವೆ. ಸಾಲ ವಸೂಲಾತಿ ಮುಂದೂಡುವ ಕುರಿತು ಸರ್ಕಾರದಿಂದ ಯಾವುದೇ ಸ್ಪಷ್ಟ ಸೂಚನೆ ಬಂದಿಲ್ಲ ಎಂಬ ಕಾರಣವನ್ನು ಬ್ಯಾಂಕ್ ಅಧಿಕಾರಿಗಳು ನೀಡುತ್ತಿದ್ದಾರೆ. ಇದರಿಂದ ರೈತರು ಮತ್ತಷ್ಟು ಆತಂಕಕ್ಕೆ ಒಳಗಾಗಿದ್ದಾರೆ ಎಂದು ತಿಳಿಸಿದರು.

ತುಮಕೂರು ಜಿಲ್ಲೆಯಲ್ಲಿ ರೈತರಿಗೆ ಬ್ಯಾಂಕ್‌ಗಳು ಹಾಗೂ ಖಾಸಗಿ ಹಣಕಾಸು ಸಂಸ್ಥೆಗಳಿಂದ ಕಿರುಕುಳ ಉಂಟಾಗದಂತೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದ್ದಾರೆ. ಅದೇ ರೀತಿಯಲ್ಲಿ ರಾಯಚೂರು ಜಿಲ್ಲೆಯಲ್ಲಿಯೂ ಸಾಲ ವಸೂಲಾತಿ ಹೆಸರಿನಲ್ಲಿ ರೈತರಿಗೆ ಅನಗತ್ಯ ಒತ್ತಡ ನೀಡದಂತೆ ಸಂಬಂಧಪಟ್ಟ ಸಂಸ್ಥೆಗಳಿಗೆ ನಿರ್ದೇಶನ ನೀಡಬೇಕು ಎಂದು ಮನವಿ ಮಾಡಿದರು.

ಫಿಲ್ಡಿ, ಪೋತ್ನಾಳ, ಕೊಟ್ನೆಕಲ್ ಸೇರಿದಂತೆ ವಿವಿಧ ಗ್ರಾಮಗಳ ರೈತರು ಸಾಲದ ಬಾಧೆಯಿಂದ ಕಂಗಾಲಾಗಿದ್ದಾರೆ. ಹುಸೇನ್ ಬಾಷ ಎಂಬ ರೈತರು ಸುಮಾರು ಎರಡು ಲಕ್ಷ ರೂಪಾಯಿ ಸಾಲಕ್ಕೆ ಸಂಬಂಧಿಸಿದಂತೆ ಅವಮಾನಕರ ಪರಿಸ್ಥಿತಿ ಎದುರಿಸಬೇಕಾಯಿತು. ರೈತರೊಂದಿಗೆ ಚರ್ಚಿಸಿ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಬದಲು ನ್ಯಾಯಾಲಯದ ಮೊರೆ ಹೋಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಒಂದು ಹಂಗಾಮಿನಲ್ಲಿ ಬೆಳೆ ಕೈಕೊಟ್ಟರೂ ರೈತರು ಆರ್ಥಿಕವಾಗಿ ಚೇತರಿಸಿಕೊಳ್ಳಲು ಹಲವು ವರ್ಷಗಳೇ ಬೇಕಾಗುತ್ತವೆ. ಸತತ ನೀರಿನ ಕೊರತೆ ಹಾಗೂ ಬೆಳೆ ನಷ್ಟದಿಂದ ರೈತ ಕುಟುಂಬಗಳ ಜೀವನ ನಿರ್ವಹಣೆಯೇ ಕಷ್ಟಕರವಾಗಿದೆ. ಇಂತಹ ಸಂದರ್ಭದಲ್ಲಿ ಸಾಲ ವಸೂಲಾತಿಗೆ ಒತ್ತಡ ಹೇರುವುದು ರೈತರ ಸಂಕಷ್ಟವನ್ನು ಮತ್ತಷ್ಟು ಹೆಚ್ಚಿಸುತ್ತದೆ. ಆದ್ದರಿಂದ ರಾಜ್ಯ ಸರ್ಕಾರ ರೈತರ ಪರಿಸ್ಥಿತಿಯನ್ನು ಗಂಭೀರವಾಗಿ ಪರಿಗಣಿಸಿ ಸಾಲ ಮರುಪಾವತಿಗೆ ಕಾಲಾವಕಾಶ ಕಲ್ಪಿಸುವುದು ಸೇರಿದಂತೆ ಅಗತ್ಯ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಜಿಲ್ಲೆಯ ಜನಪ್ರತಿನಿಧಿಗಳು ಕೂಡ ರೈತರ ಸಮಸ್ಯೆಗಳಿಗೆ ಸ್ಪಂದಿಸಬೇಕು. ಶಾಸಕರು ತಮ್ಮ ಶಾಸನಬದ್ಧ ಅಧಿಕಾರವನ್ನು ಬಳಸಿಕೊಂಡು ನೀರಾವರಿ ಹಾಗೂ ಬ್ಯಾಂಕಿಂಗ್ ಕ್ಷೇತ್ರದ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ ರೈತರಿಗೆ ನ್ಯಾಯ ಒದಗಿಸಬೇಕು. ಜಿಲ್ಲಾಧಿಕಾರಿಗಳು ಕೂಡಲೇ ಮಧ್ಯಪ್ರವೇಶಿಸಿ ಕಾಲುವೆ ನೀರಿನ ಸಮರ್ಪಕ ಹಂಚಿಕೆ, ಕುಡಿಯುವ ನೀರಿನ ಪೂರೈಕೆ ಹಾಗೂ ಸಾಲ ವಸೂಲಾತಿ ಕಿರುಕುಳ ತಡೆಗೆ ಕ್ರಮ ಕೈಗೊಳ್ಳಬೇಕು ಎಂದು ಅಮೀನ್ ಪಾಷ ದಿದ್ದಗಿ ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ದುರುಗಪ್ಪ, ಪಾಶುನಾಥ, ಬಸವಲಿಂಗ, ಸಂತೋಷ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಏಡ್ಸ್ ತಡೆಗಟ್ಟುವಲ್ಲಿ ಯುವಜನರ ಪಾತ್ರ ಮಹತ್ವದ್ದು: ಟಿಕಪ್ಪ ಚವ್ಹಾಣ

ರಾಯಚೂರು: ಏಡ್ಸ್ ತಡೆಗಟ್ಟುವಲ್ಲಿ ಸಾಮಾಜಿಕ ಜಾಗೃತಿ, ವೈಜ್ಞಾನಿಕ ಅರಿವು ಹಾಗೂ ಮಾನವೀಯ ಮನೋಭಾವ ಅತ್ಯಂತ ಅಗತ್ಯವಾಗಿದ್ದು, ಯುವಜನರು ಸಮಾಜದಲ್ಲಿ ಆರೋಗ್ಯ ಜಾಗೃತಿ ಮೂಡಿಸುವ ಜವಾಬ್ದಾರಿಯನ್ನು ವಹಿಸಿಕೊಳ್ಳಬೇಕು ಎಂದು ಉಪನ್ಯಾಸಕ ಟಿಕಪ್ಪ ಚವ್ಹಾಣ ಹೇಳಿದರು.



ರಾಯಚೂರು ತಾಲೂಕಿನ ಮನ್ಸಲಾಪುರ ಗ್ರಾಮದ ಶ್ರೀ ಸಿದ್ದಲಿಂಗೇಶ್ವರ ದೇವಸ್ಥಾನದಲ್ಲಿ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ಹಾಗೂ ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಹೇರೂರು ಚಂದ್ರಾಯಗೌಡ ಮಲ್ಹಾರ ಸಿದ್ದಪ್ಪಗೌಡ ಪದವಿ ಮಹಾವಿದ್ಯಾಲಯದ ವತಿಯಿಂದ ಆಯೋಜಿಸಿರುವ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ವಿಶೇಷ ಶಿಬಿರದ ಮೂರನೇ ದಿನವಾದ ಬುಧವಾರ (ಅ.14) 'ಏಡ್ಸ್ ತಡೆಗಟ್ಟುವಿಕೆಯಲ್ಲಿ ಸಮಾಜದಲ್ಲಿ ಯುವಕರ ಪಾತ್ರ' ವಿಷಯದ ಕುರಿತು ನಡೆದ ಜಾಗೃತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಎಚ್‌ಐವಿ ಸೋಂಕು ಹರಡುವ ವಿಧಾನಗಳು ಹಾಗೂ ಅದನ್ನು ತಡೆಗಟ್ಟಲು ಅನುಸರಿಸಬೇಕಾದ ಮುನ್ನೆಚ್ಚರಿಕೆಗಳ ಕುರಿತು ಪ್ರತಿಯೊಬ್ಬರೂ ತಿಳಿದುಕೊಳ್ಳಬೇಕು. ಏಡ್ಸ್ ಕುರಿತು ಸಮಾಜದಲ್ಲಿರುವ ತಪ್ಪು ಕಲ್ಪನೆಗಳನ್ನು ಹೋಗಲಾಡಿಸಿ ವೈಜ್ಞಾನಿಕ ಮಾಹಿತಿಯನ್ನು ಜನರಿಗೆ ತಲುಪಿಸುವಲ್ಲಿ ಯುವಕರ ಪಾತ್ರ ಪ್ರಮುಖವಾಗಿದೆ. ಎಚ್‌ಐವಿ ಸೋಂಕಿತರನ್ನು ತಾರತಮ್ಯದಿಂದ ಕಾಣದೆ, ಅವರೊಂದಿಗೆ ಮಾನವೀಯತೆಯಿಂದ ವರ್ತಿಸಬೇಕು. ಆರೋಗ್ಯಕರ ಜೀವನಶೈಲಿ ಹಾಗೂ ಜವಾಬ್ದಾರಿಯುತ ನಡವಳಿಕೆಯನ್ನು ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮಾಧಿಕಾರಿ ಶರಣಪ್ಪ ಮಾತನಾಡಿ, ವಿದ್ಯಾರ್ಥಿಗಳು ಶಿಬಿರದಲ್ಲಿ ಪಡೆದುಕೊಂಡ ಆರೋಗ್ಯ ಸಂಬಂಧಿತ ಮಾಹಿತಿಯನ್ನು ತಮ್ಮ ಕುಟುಂಬ ಹಾಗೂ ಗ್ರಾಮೀಣ ಪ್ರದೇಶದ ಜನರಿಗೆ ತಲುಪಿಸಬೇಕು. ಜಾಗೃತಿ ಕಾರ್ಯಕ್ರಮಗಳು ಕೇವಲ ಶಿಬಿರಕ್ಕೆ ಸೀಮಿತವಾಗದೆ ಸಮಾಜದ ಪ್ರತಿಯೊಬ್ಬರಿಗೂ ತಲುಪುವಂತಾಗಬೇಕು ಎಂದರು.

ಸಹ ಶಿಬಿರಾಧಿಕಾರಿ ಹಾಗೂ ಇಂಗ್ಲಿಷ್ ಉಪನ್ಯಾಸಕ ಈರಪ್ಪ ಸರ್ಜಾಪುರ ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆಯ ಶಿಬಿರಗಳು ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವ, ನಾಯಕತ್ವ ಗುಣ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುತ್ತವೆ. ಗ್ರಾಮೀಣ ಪ್ರದೇಶಗಳಲ್ಲಿ ಆರೋಗ್ಯ, ಸ್ವಚ್ಛತೆ ಮತ್ತು ಸಾಮಾಜಿಕ ಸಮಸ್ಯೆಗಳ ಕುರಿತು ಅರಿವು ಮೂಡಿಸಲು ಇಂತಹ ಶಿಬಿರಗಳು ಸಹಕಾರಿಯಾಗಿವೆ ಎಂದು ತಿಳಿಸಿದರು.

ಮಹಾವಿದ್ಯಾಲಯದ ಪ್ರಾಂಶುಪಾಲ ಪರ್ವತರೆಡ್ಡಿ ಮಾತನಾಡಿ, ವಿದ್ಯಾರ್ಥಿಗಳು ಪಠ್ಯಪುಸ್ತಕದ ಜ್ಞಾನಕ್ಕೆ ಸೀಮಿತವಾಗದೆ ಸಮಾಜದ ಸಮಸ್ಯೆಗಳನ್ನು ಅರಿತು ಅವುಗಳ ಪರಿಹಾರಕ್ಕೆ ಕೈಜೋಡಿಸಬೇಕು. ವೈಜ್ಞಾನಿಕ ಮನೋಭಾವ ಬೆಳೆಸಿಕೊಂಡು ಆರೋಗ್ಯಕರ ಸಮಾಜ ನಿರ್ಮಾಣದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ವೀರಶೈವ ಲಿಂಗಾಯತ ಸಮಾಜದ ಸದಸ್ಯ ನೀಲಕಂಠರಾವ ಪಾಟೀಲ ಮಾತನಾಡಿ, ಏಡ್ ತಡೆಗಟ್ಟುವುದು ಆರೋಗ್ಯ ಇಲಾಖೆಯೊಂದರ ಜವಾಬ್ದಾರಿಯಲ್ಲ. ಸಮಾಜದ ಪ್ರತಿಯೊಬ್ಬರೂ ಈ ನಿಟ್ಟಿನಲ್ಲಿ ಜಾಗೃತರಾಗಬೇಕು. ಸೋಂಕಿತರ ಬಗ್ಗೆ ತಾರತಮ್ಯ ತೋರದೆ ಅವರಿಗೆ ಆತ್ಮಸ್ಥೈರ್ಯ ತುಂಬುವ ಕೆಲಸ ಮಾಡಬೇಕು. ಯುವಕರು ಜನಜಾಗೃತಿಯ ಮೂಲಕ ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರಲು ಮುಂದಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಸಹ ಶಿಬಿರಾಧಿಕಾರಿ ಗಂಗಾಧರ, ಉಪನ್ಯಾಸಕರಾದ ದೀಪಾ, ಅನ್ನಪೂರ್ಣ, ಅಜೇಯಕುಮಾರ ಹಾಗೂ ರಾಷ್ಟ್ರೀಯ ಸೇವಾ ಯೋಜನೆಯ ಶಿಬಿರಾರ್ಥಿಗಳು ಉಪಸ್ಥಿತರಿದ್ದರು.

# ಹಿಂದೂ ಧರ್ಮದ ರಕ್ಷಣೆಗೆ ಪ್ರತಿಯೊಬ್ಬರೂ ಮುಂದಾಗಬೇಕು: ಪ್ರಮೋದ್ ಮುತಾಲಿಕ್

ಮಾನ್ವಿ: ಹಿಂದೂ ಧರ್ಮದ ಸಂಸ್ಕೃತಿ, ಸಂಪ್ರದಾಯ ಹಾಗೂ ಧಾರ್ಮಿಕ ಪರಂಪರೆಯನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬ ಹಿಂದೂವಿನ ಮೇಲಿದೆ. ಧರ್ಮದ ರಕ್ಷಣೆಯಲ್ಲಿ ದೇವಸ್ಥಾನಗಳು ಹಾಗೂ ಧಾರ್ಮಿಕ ಕೇಂದ್ರಗಳ ಕೊಡುಗೆ ಅಪಾರವಾಗಿದೆ ಎಂದು ಶ್ರೀರಾಮಸೇನೆಯ ರಾಷ್ಟ್ರೀಯ ಅಧ್ಯಕ್ಷ ಪ್ರಮೋದ್ ಮುತಾಲಿಕ್ ಹೇಳಿದರು.



ಪಟ್ಟಣದ ಎಪಿಎಂಸಿ ಆವರಣದಲ್ಲಿರುವ ಶ್ರೀ ಉದ್ಭವ ಆಂಜನೇಯಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿ, ದೇವರಿಗೆ ವಿಶೇಷ ಪೂಜೆ ಸಲ್ಲಿಸಿದ ನಂತರ ಮಾತನಾಡಿದ ಅವರು, ಹಿಂದೂ ಧರ್ಮವು ಸಾವಿರಾರು ವರ್ಷಗಳ ಇತಿಹಾಸ ಹೊಂದಿದ್ದು, ಸನಾತನ ಸಂಸ್ಕೃತಿ, ಆಚಾರ-ವಿಚಾರ ಹಾಗೂ ಜೀವನ ಮೌಲ್ಯಗಳನ್ನು ಒಳಗೊಂಡಿದೆ. ಈ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ತಿಳಿಸಿದರು.

ದೇವಸ್ಥಾನಗಳು ಕೇವಲ ಪೂಜಾ ಸ್ಥಳಗಳಾಗಿರದೆ ಧಾರ್ಮಿಕ ಜಾಗೃತಿ, ಸಂಸ್ಕೃತಿ ಹಾಗೂ ಸಾಮಾಜಿಕ ಒಗ್ಗಟ್ಟಿನ ಕೇಂದ್ರಗಳಾಗಿವೆ. ಹಿಂದಿನಿಂದಲೂ ದೇವಸ್ಥಾನಗಳು ಜನರಲ್ಲಿ ಭಕ್ತಿ, ಶ್ರದ್ಧೆ, ನೈತಿಕ ಮೌಲ್ಯಗಳು ಹಾಗೂ ಸೇವಾ ಮನೋಭಾವ ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ. ಯುವಜನರು ತಮ್ಮ ಧಾರ್ಮಿಕ ಪರಂಪರೆಯ ಮಹತ್ವವನ್ನು ಅರಿತು ಸಂಸ್ಕೃತಿಯ ಸಂರಕ್ಷಣೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಶ್ರೀ ಉದ್ಭವ ಆಂಜನೇಯಸ್ವಾಮಿ ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಸಿದ್ದಲಿಂಗಪ್ಪಗೌಡ ಅಲ್ದಾಳ್ ಅವರು ಪ್ರಮೋದ್ ಮುತಾಲಿಕ್ ಅವರನ್ನು ಸನ್ಮಾನಿಸಿ ಗೌರವಿಸಿದರು.

ಕಾರ್ಯಕ್ರಮದಲ್ಲಿ ಅಮರೇಗೌಡ ಯರದಾಳ್, ನಾಗರಾಜ, ಗಿರೀಶಗೌಡ, ಶರಣಬಸವ, ಸುರೇಶ ನಾಡಗೌಡ, ಗೋಪಾಲ ಇಬ್ರಾಹಿಂಪುರ, ವೆಂಕೋಬ ನಾಯಕ, ಲಿಂಗರಾಜ ಗಡಿಗಿ, ನಾಗರಾಜ ಬಲ್ಲಟಗಿ, ಶಿವಪ್ಪಗೌಡ, ದೇವಸ್ಥಾನದ ಅರ್ಚಕ ಪ್ರವೀಣಕುಮಾರ ಸೇರಿದಂತೆ ದೇವಸ್ಥಾನ ಟ್ರಸ್ಟ್ ಪದಾಧಿಕಾರಿಗಳು ಹಾಗೂ ಭಕ್ತರು ಉಪಸ್ಥಿತರಿದ್ದರು.

# ಬಾಲ್ಯವಿವಾಹದಿಂದ ಹೆಣ್ಣುಮಕ್ಕಳ ಆರೋಗ್ಯಕ್ಕೆ ಅಪಾಯ: ಡಾ. ಸುನೀಲ್ ಸರೋದೆ

ಸಿರವಾರ, ಅ.14: ಬಾಲ್ಯವಿವಾಹವು ಹೆಣ್ಣುಮಕ್ಕಳ ದೈಹಿಕ ಹಾಗೂ ಮಾನಸಿಕ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಹೆಣ್ಣುಮಕ್ಕಳಿಗೆ ಮದುವೆ ಮಾಡುವಾಗ ಕನಿಷ್ಠ 18 ವರ್ಷ ವಯಸ್ಸು ಪೂರ್ಣಗೊಂಡಿರುವುದು ಅತ್ಯಂತ ಮುಖ್ಯವಾಗಿದ್ದು, ಪೋಷಕರು ಮಕ್ಕಳ ಆರೋಗ್ಯ ಹಾಗೂ ಭವಿಷ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಸಿರವಾರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಸುನೀಲ್ ಸರೋದೆ ತಿಳಿಸಿದರು.



ರಾಯಚೂರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಸಿರವಾರ ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ಜಾನಾಪುರ ಕ್ಯಾಂಪ್ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಆರೋಗ್ಯ ಜನಜಾಗೃತಿ ಕಾರ್ಯಕ್ರಮದಲ್ಲಿ ಗ್ರಾಮಸ್ಥರು ಹಾಗೂ ತಾಯಂದಿರೊಂದಿಗೆ ಮಾತನಾಡಿದ ಅವರು, ಬಾಲ್ಯವಿವಾಹದಿಂದ ಉಂಟಾಗುವ ಆರೋಗ್ಯ ಸಮಸ್ಯೆಗಳು ಹಾಗೂ ಕುಟುಂಬ ಕಲ್ಯಾಣ ಯೋಜನೆಗಳ ಕುರಿತು ಮಾಹಿತಿ ನೀಡಿದರು.

ಬಾಲ್ಯದಿಂದ ಹದಿಹರೆಯಕ್ಕೆ ಕಾಲಿಡುವ ಹಂತದಲ್ಲಿಯೇ ಮದುವೆ ಮಾಡುವುದು ಹಾಗೂ ಚಿಕ್ಕ ವಯಸ್ಸಿನಲ್ಲಿ ಗರ್ಭಧರಿಸುವುದರಿಂದ ತಾಯಿ ಮತ್ತು ಮಗುವಿನ ಆರೋಗ್ಯಕ್ಕೆ ಅಪಾಯ ಎದುರಾಗಬಹುದು. ರಕ್ತಹೀನತೆ, ಅಧಿಕ ರಕ್ತದೊತ್ತಡ, ಅಪೂರ್ಣ ದೈಹಿಕ ಬೆಳವಣಿಗೆ ಸೇರಿದಂತೆ ವಿವಿಧ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುವ ಸಾಧ್ಯತೆಯಿದೆ. ಇದರಿಂದ ಹೆರಿಗೆ ಸಂದರ್ಭದಲ್ಲಿ ತೊಂದರೆಗಳು ಉಂಟಾಗಿ ಸಿಸೇರಿಯನ್ ಶಸ್ತ್ರಚಿಕಿತ್ಸೆಯ ಅಗತ್ಯ ಎದುರಾಗಬಹುದು. ಅಲ್ಲದೆ ಕಡಿಮೆ ತೂಕದ ಮಗು ಜನಿಸುವುದು ಹಾಗೂ ಮಗುವಿನ ಬೆಳವಣಿಗೆಯಲ್ಲಿ ಕುಂಠಿತ ಉಂಟಾಗುವ ಅಪಾಯವಿದೆ ಎಂದು ವಿವರಿಸಿದರು.

ತಾಯಿ ಮತ್ತು ಮಗುವಿನ ಆರೋಗ್ಯ ರಕ್ಷಣೆಗೆ ಎರಡು ಮಕ್ಕಳ ಜನನದ ನಡುವೆ ಕನಿಷ್ಠ ಮೂರು ವರ್ಷಗಳ ಅಂತರ ಕಾಯ್ದುಕೊಳ್ಳುವುದು ಉತ್ತಮ. ಇದರಿಂದ ತಾಯಿಯ ದೇಹವು ಚೇತರಿಸಿಕೊಳ್ಳಲು ಹಾಗೂ ಮೊದಲ ಮಗುವಿನ ಆರೋಗ್ಯಕರ ಬೆಳವಣಿಗೆಗೆ ಅನುಕೂಲವಾಗುತ್ತದೆ. ಕುಟುಂಬ ಯೋಜನೆ ಕುರಿತು ದಂಪತಿಗಳು ಸೂಕ್ತ ಅರಿವು ಹೊಂದಿ ಆರೋಗ್ಯಕರ ಕುಟುಂಬ ನಿರ್ಮಾಣಕ್ಕೆ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಸರ್ಕಾರಿ ಆರೋಗ್ಯ ಕೇಂದ್ರಗಳಲ್ಲಿ ಕುಟುಂಬ ಕಲ್ಯಾಣ ಯೋಜನೆಯಡಿ ವಿವಿಧ ಗರ್ಭನಿರೋಧಕ ವಿಧಾನಗಳು ಉಚಿತವಾಗಿ ಲಭ್ಯವಿವೆ. ಮಹಿಳೆಯರಿಗೆ ಕಾಪರ್-ಟಿ, ಮಾಲಾ-ಎನ್ ಮಾತ್ರೆಗಳು, ಛಾಯಾ ಮಾತ್ರೆಗಳು ಹಾಗೂ ಪ್ರತಿ ಮೂರು ತಿಂಗಳಿಗೊಮ್ಮೆ ಪಡೆಯಬಹುದಾದ ಗರ್ಭನಿರೋಧಕ ಚುಚ್ಚುಮದ್ದು ಲಭ್ಯವಿದೆ. ಪುರುಷರಿಗೆ ಕಾಂಡೋಮ್‌ಗಳ ವ್ಯವಸ್ಥೆಯಿದ್ದು, ಇವುಗಳ ಬಳಕೆಯಿಂದ ಮಕ್ಕಳ ಜನನದ ನಡುವೆ ಅಗತ್ಯ ಅಂತರ ಕಾಯ್ದುಕೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಇನ್ನು ಮುಂದೆ ಮಕ್ಕಳನ್ನು ಹೊಂದಲು ಇಚ್ಛಿಸದ ದಂಪತಿಗಳಿಗೆ ಶಾಶ್ವತ ಕುಟುಂಬ ಯೋಜನಾ ವಿಧಾನಗಳೂ ಲಭ್ಯವಿವೆ. ಮಹಿಳೆಯರಿಗೆ ಲ್ಯಾಪರೊಸ್ಕೋಪಿಕ್ ಸಂತಾನಹರಣ ಹಾಗೂ ಟ್ಯುಬೆಕ್ಟಮಿ ಶಸ್ತ್ರಚಿಕಿತ್ಸೆ ಮತ್ತು ಪುರುಷರಿಗೆ ನೋ-ಸ್ಕಾಲ್ಪೆಲ್ ವ್ಯಾಸೆಕ್ಟಮಿ (ಎನ್‌ಎಸ್‌ವಿ) ಸೌಲಭ್ಯಗಳಿವೆ. ದಂಪತಿಗಳು ಆರೋಗ್ಯ ಸಿಬ್ಬಂದಿಯ ಸಲಹೆ ಪಡೆದು ತಮಗೆ ಸೂಕ್ತವಾದ ಕುಟುಂಬ ಕಲ್ಯಾಣ ವಿಧಾನವನ್ನು ಆಯ್ಕೆ ಮಾಡಿಕೊಳ್ಳಬೇಕು ಎಂದು ಹೇಳಿದರು.

ಬಾಲ್ಯವಿವಾಹ ತಡೆಗಟ್ಟುವುದು ಕೇವಲ ಸರ್ಕಾರ ಮತ್ತು ಆರೋಗ್ಯ ಇಲಾಖೆಯ ಜವಾಬ್ದಾರಿಯಲ್ಲ. ಪೋಷಕರು, ಗ್ರಾಮಸ್ಥರು ಹಾಗೂ ಸಮುದಾಯದ ಪ್ರತಿಯೊಬ್ಬರೂ ಈ ಬಗ್ಗೆ ಜಾಗೃತರಾಗಬೇಕು. ಹೆಣ್ಣುಮಕ್ಕಳ ಶಿಕ್ಷಣ, ಆರೋಗ್ಯ ಮತ್ತು ಸುರಕ್ಷತೆಗೆ ಆದ್ಯತೆ ನೀಡುವ ಮೂಲಕ ಬಾಲ್ಯವಿವಾಹ ಮುಕ್ತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಶ್ರೀದೇವಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಧರ್ಮಾರೆಡ್ಡಿ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಚಿತ್ರಾ, ಅಂಗನವಾಡಿ ಕಾರ್ಯಕರ್ತೆ ಲಕ್ಷ್ಮೀ ಸೇರಿದಂತೆ ಗ್ರಾಮಸ್ಥರು ಹಾಗೂ ತಾಯಂದಿರು ಉಪಸ್ಥಿತರಿದ್ದರು.

# ಹಿಂದೂ ಸಂಪ್ರದಾಯ ವಿರೋಧಿಸುವ ಶಿಕ್ಷಣ ಸಂಸ್ಥೆಗಳ ವಿರುದ್ಧ ಹೋರಾಟ: ಪ್ರಮೋದ್ ಮುತಾಲಿಕ್




ಮಾನ್ವಿ: ಹಿಂದೂ ಧರ್ಮದ ಆಚರಣೆಗಳು ಹಾಗೂ ಸಂಪ್ರದಾಯಗಳಿಗೆ ಅಡ್ಡಿಪಡಿಸುವ ಮತ್ತು ದಸರಾ ಹಬ್ಬದ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ರಜೆ ನೀಡದೆ ಧಾರ್ಮಿಕ ಆಚರಣೆಗಳಿಂದ ದೂರವಿಡುವ ಶಿಕ್ಷಣ ಸಂಸ್ಥೆಗಳ ವಿರುದ್ಧ ಶ್ರೀರಾಮಸೇನೆ ವತಿಯಿಂದ ರಾಜ್ಯಾದ್ಯಂತ ಹೋರಾಟ ನಡೆಸಲಾಗುವುದು ಎಂದು ಸಂಘಟನೆಯ ರಾಷ್ಟ್ರೀಯ ಅಧ್ಯಕ್ಷ ಪ್ರಮೋದ್ ಮುತಾಲಿಕ್ ಎಚ್ಚರಿಕೆ ನೀಡಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಹಾಗೂ ಶಿಕ್ಷಣ ಸಚಿವರು ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಅಗತ್ಯ ಆದ್ಯತೆ ನೀಡುತ್ತಿಲ್ಲ. ಸರ್ಕಾರದ ಶಿಕ್ಷಣ ನೀತಿ ಹಾಗೂ ನಿರ್ಲಕ್ಷ್ಯದಿಂದ ರಾಜ್ಯದಲ್ಲಿ ಅಂದಾಜು ಮೂರು ಸಾವಿರಕ್ಕೂ ಹೆಚ್ಚು ಸರ್ಕಾರಿ ಶಾಲೆಗಳು ಮುಚ್ಚಲ್ಪಟ್ಟಿವೆ. ಮೂಲಸೌಕರ್ಯ ಮತ್ತು ಶಿಕ್ಷಕರ ಕೊರತೆಯಿಂದಾಗಿ ಪೋಷಕರು ಅನಿವಾರ್ಯವಾಗಿ ತಮ್ಮ ಮಕ್ಕಳನ್ನು ಖಾಸಗಿ ಶಾಲೆಗಳಿಗೆ ದಾಖಲಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದು ಕನ್ನಡ ಭಾಷೆ ಹಾಗೂ ಸರ್ಕಾರಿ ಶಿಕ್ಷಣ ವ್ಯವಸ್ಥೆಗೆ ಸರ್ಕಾರ ಮಾಡುತ್ತಿರುವ ಅನ್ಯಾಯವಾಗಿದೆ ಎಂದು ಆರೋಪಿಸಿದರು.

ಸರ್ಕಾರಿ ಶಾಲೆಗಳ ದುಸ್ಥಿತಿಯನ್ನೇ ಬಂಡವಾಳ ಮಾಡಿಕೊಂಡಿರುವ ಕೆಲವು ಖಾಸಗಿ ಹಾಗೂ ಕ್ರೈಸ್ತ ಮಿಷನರಿ ಶಿಕ್ಷಣ ಸಂಸ್ಥೆಗಳು ಶಿಕ್ಷಣವನ್ನು ವ್ಯಾಪಾರವನ್ನಾಗಿ ಮಾಡಿಕೊಂಡಿವೆ. ಕೆಲವು ಮಿಷನರಿ ಸಂಸ್ಥೆಗಳು ಶಿಕ್ಷಣದ ಹೆಸರಿನಲ್ಲಿ ಮಕ್ಕಳನ್ನು ಕ್ರೈಸ್ತ ಧರ್ಮದತ್ತ ಸೆಳೆಯುವ ಪ್ರಯತ್ನ ಮಾಡುತ್ತಿವೆ ಎಂದು ಆರೋಪಿಸಿದ ಅವರು, ಇಂತಹ ಚಟುವಟಿಕೆಗಳಿಗೆ ಕೆಲವು ಶಿಕ್ಷಣಾಧಿಕಾರಿಗಳ ಪರೋಕ್ಷ ಬೆಂಬಲವಿದೆ ಎಂದು ದೂರಿದರು.

ಶಿಕ್ಷಣ ಇಲಾಖೆಯ ನಿಯಮಗಳನ್ನು ಉಲ್ಲಂಘಿಸುವ ಖಾಸಗಿ ಶಾಲೆಗಳ ವಿರುದ್ಧ ಅಧಿಕಾರಿಗಳು ಕ್ರಮ ಕೈಗೊಳ್ಳುತ್ತಿಲ್ಲ. ಶಿಕ್ಷಣ ಸಚಿವರು ಹಾಗೂ ಸಂಬಂಧಪಟ್ಟ ಅಧಿಕಾರಿಗಳು ಖಾಸಗಿ ಶಿಕ್ಷಣ ಸಂಸ್ಥೆಗಳ ಒತ್ತಡಕ್ಕೆ ಮಣಿಯುತ್ತಿದ್ದಾರೆ. ನಿಯಮ ಉಲ್ಲಂಘನೆಗಳನ್ನು ನಿರ್ಲಕ್ಷಿಸುವ ಅಧಿಕಾರಿಗಳ ವಿರುದ್ಧ ಕಾನೂನು ಹೋರಾಟ ನಡೆಸಲಾಗುವುದು ಎಂದು ತಿಳಿಸಿದರು.

ದಸರಾ, ವಿಜಯದಶಮಿ ಹಾಗೂ ದೀಪಾವಳಿ ಹಬ್ಬಗಳು ನಾಡಿನ ಸಂಸ್ಕೃತಿ ಮತ್ತು ಪರಂಪರೆಯ ಅವಿಭಾಜ್ಯ ಅಂಗವಾಗಿವೆ. ಮಕ್ಕಳು ತಮ್ಮ ಕುಟುಂಬದೊಂದಿಗೆ ಹಬ್ಬಗಳನ್ನು ಆಚರಿಸಿ, ಅವುಗಳ ಮಹತ್ವವನ್ನು ಅರಿತುಕೊಳ್ಳಬೇಕೆಂಬ ಉದ್ದೇಶದಿಂದ ಪ್ರತಿವರ್ಷ ದಸರಾ ಸಂದರ್ಭದಲ್ಲಿ ಶಾಲೆಗಳಿಗೆ ರಜೆ ನೀಡಲಾಗುತ್ತದೆ. ಆದರೆ ಕೆಲವು ಕ್ರೈಸ್ತ ಶಿಕ್ಷಣ ಸಂಸ್ಥೆಗಳಲ್ಲಿ ಹಿಂದೂ ವಿದ್ಯಾರ್ಥಿಗಳು ಹೂ, ಕುಂಕುಮ ಹಾಗೂ ಬಳೆಗಳನ್ನು ಧರಿಸುವುದಕ್ಕೆ ನಿರ್ಬಂಧ ವಿಧಿಸಲಾಗುತ್ತಿದೆ ಎಂಬ ದೂರುಗಳಿವೆ. ದಸರಾ ಹಬ್ಬದ ಸಂದರ್ಭದಲ್ಲಿ ಉದ್ದೇಶಪೂರ್ವಕವಾಗಿ ಪರೀಕ್ಷೆಗಳನ್ನು ನಡೆಸುವ ಮೂಲಕ ವಿದ್ಯಾರ್ಥಿಗಳು ಹಬ್ಬಗಳಲ್ಲಿ ಭಾಗವಹಿಸದಂತೆ ಮಾಡಲಾಗುತ್ತಿದೆ ಎಂದು ಆರೋಪಿಸಿದರು.

ಕೆಲವು ಶಿಕ್ಷಣ ಸಂಸ್ಥೆಗಳು ದಸರಾ ಹಬ್ಬಕ್ಕೆ ರಜೆ ನೀಡದೆ, ಕ್ರಿಸ್‌ಮಸ್ ಸಂದರ್ಭದಲ್ಲಿ ಹತ್ತು ದಿನಗಳವರೆಗೆ ರಜೆ ನೀಡುತ್ತಿವೆ. ಸರ್ಕಾರದ ರಜೆ ನಿಯಮಗಳನ್ನು ಎಲ್ಲ ಶಿಕ್ಷಣ ಸಂಸ್ಥೆಗಳು ಸಮಾನವಾಗಿ ಪಾಲಿಸಬೇಕು. ವಿದ್ಯಾರ್ಥಿಗಳ ಧಾರ್ಮಿಕ ಆಚರಣೆ ಮತ್ತು ಸಂಸ್ಕೃತಿಗೆ ಗೌರವ ನೀಡಬೇಕು. ಇಲ್ಲದಿದ್ದರೆ ಅಂತಹ ಶಿಕ್ಷಣ ಸಂಸ್ಥೆಗಳ ಮುಂದೆ ಶ್ರೀರಾಮಸೇನೆ ವತಿಯಿಂದ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ಮುಂಬರುವ ಹಬ್ಬಗಳನ್ನು ಹಿಂದೂಗಳು ಹಲಾಲ್ ಮುಕ್ತವಾಗಿ ಆಚರಿಸಬೇಕು ಎಂದು ಕರೆ ನೀಡಿದ ಅವರು, ತಮ್ಮ ಸಂಪ್ರದಾಯಗಳನ್ನು ಗೌರವಿಸುವ ವ್ಯಾಪಾರಿಗಳೊಂದಿಗೆ ವ್ಯವಹಾರ ನಡೆಸುವಂತೆ ಮನವಿ ಮಾಡಿದರು. ಹಿಂದೂಗಳ ಪವಿತ್ರ ಕ್ಷೇತ್ರಗಳು ಹಾಗೂ ಧಾರ್ಮಿಕ ಶ್ರದ್ಧಾಕೇಂದ್ರಗಳ ಪಾವಿತ್ರ್ಯತೆಗೆ ಧಕ್ಕೆಯಾಗದಂತೆ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಧಾರ್ಮಿಕ ಸ್ಥಳಗಳಲ್ಲಿ ಮಾಂಸ ಸೇವನೆಯಂತಹ ಘಟನೆಗಳು ಕಂಡುಬಂದಲ್ಲಿ ಕಾನೂನುಬದ್ಧವಾಗಿ ದೂರು ದಾಖಲಿಸಿ ಹೋರಾಟ ನಡೆಸಲಾಗುವುದು ಎಂದರು.

ಶ್ರೀರಾಮಸೇನೆ ಎಲ್ಲ ಧರ್ಮ ಹಾಗೂ ಸಮುದಾಯಗಳನ್ನು ಸಮಾನವಾಗಿ ಕಾಣುತ್ತದೆ. ಸಂವಿಧಾನ ಪ್ರತಿಯೊಬ್ಬರಿಗೂ ಸಮಾನತೆಯ ಹಕ್ಕನ್ನು ನೀಡಿದೆ. ಅಸ್ಪೃಶ್ಯತೆ, ದೌರ್ಜನ್ಯ ಮತ್ತು ಶೋಷಣೆಗೆ ಯಾವುದೇ ಧರ್ಮದಲ್ಲಿ ಅವಕಾಶವಿಲ್ಲ. ದಲಿತರ ಮೇಲೆ ಎಲ್ಲಿಯೇ ದೌರ್ಜನ್ಯ ನಡೆದರೂ ಶೋಷಿತರ ಪರವಾಗಿ ಶ್ರೀರಾಮಸೇನೆ ಹೋರಾಟ ನಡೆಸಲಿದೆ ಎಂದು ಹೇಳಿದರು.

ಹಿಂದೂ ಸಮುದಾಯದ ವಿವಿಧ ವರ್ಗಗಳ ನಡುವೆ ಸೌಹಾರ್ದತೆ ಹಾಗೂ ಸಮಾನತೆ ಬೆಳೆಸುವ ಉದ್ದೇಶದಿಂದ ರಾಜ್ಯದ ಎಂಟು ಕಡೆಗಳಲ್ಲಿನ ದೇವಸ್ಥಾನಗಳಲ್ಲಿ ಸಾಮೂಹಿಕ ಭೋಜನ ಕಾರ್ಯಕ್ರಮಗಳನ್ನು ಆಯೋಜಿಸಿಕೊಂಡು ಬರಲಾಗುತ್ತಿದೆ. ಜಾತಿ ಭೇದವನ್ನು ಹೋಗಲಾಡಿಸಿ ಎಲ್ಲರೂ ಒಗ್ಗಟ್ಟಿನಿಂದ ಬದುಕುವ ವಾತಾವರಣ ನಿರ್ಮಾಣವಾಗಬೇಕು ಎಂಬುದು ಸಂಘಟನೆಯ ಆಶಯವಾಗಿದೆ ಎಂದು ತಿಳಿಸಿದರು.

ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಕುರಿತು ಪ್ರತಿಕ್ರಿಯಿಸಿದ ಅವರು, ಚುನಾವಣಾ ಇಲಾಖೆಯು ಮತದಾರರ ಪಟ್ಟಿಯನ್ನು ಶುದ್ಧೀಕರಿಸುವ ಉದ್ದೇಶದಿಂದ ಈ ಪ್ರಕ್ರಿಯೆ ನಡೆಸುತ್ತಿದೆ. ಆದರೆ ಕೆಲವರು ರಾಜಕೀಯ ಕಾರಣಗಳಿಗಾಗಿ ಜನರಲ್ಲಿ ಗೊಂದಲ ಮೂಡಿಸುತ್ತಿದ್ದಾರೆ. ಯಾರಾದರೂ ಮತದಾನದ ಹಕ್ಕಿನಿಂದ ವಂಚಿತರಾದರೆ ಕಾನೂನು ಮಾರ್ಗದ ಮೂಲಕ ನ್ಯಾಯ ಪಡೆಯಲು ಅವಕಾಶವಿದೆ. ಈ ವಿಷಯದಲ್ಲಿ ಅನಗತ್ಯ ರಾಜಕೀಯ ಮಾಡುವುದು ಸರಿಯಲ್ಲ ಎಂದು ಅಭಿಪ್ರಾಯಪಟ್ಟರು.

ಚಲನಚಿತ್ರ ನಟ ಪ್ರಕಾಶ್ ರಾಜ್ ಅವರ ಕುರಿತು ಮಾತನಾಡಿದ ಮುತಾಲಿಕ್, ಅವರ ಅಭಿನಯವನ್ನು ನಾವೆಲ್ಲರೂ ಮೆಚ್ಚುತ್ತೇವೆ. ಆದರೆ ಅವರು ತಮ್ಮ ನಟನಾ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಸಾರ್ವಜನಿಕರನ್ನು ದಾರಿತಪ್ಪಿಸುವಂತಹ ಹೇಳಿಕೆಗಳನ್ನು ನೀಡಬಾರದು ಎಂದು ಟೀಕಿಸಿದರು.

ಸುದ್ದಿಗೋಷ್ಠಿಯಲ್ಲಿ ಶ್ರೀರಾಮಸೇನೆಯ ಕಲ್ಯಾಣ ಕರ್ನಾಟಕ ಪ್ರಧಾನ ಕಾರ್ಯದರ್ಶಿ ಮಂಜುನಾಥ ಬಾವಿ, ಜಿಲ್ಲಾಧ್ಯಕ್ಷ ರಘುನಾಯಕ, ಪ್ರಮೋದ್ ಆಚಾರ್ಯ, ನಾಗರಾಜ ಶೆಟ್ಟಿ ಚೀಕಲಪರ್ವಿ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಕನ್ನಡ ರಾಜ್ಯೋತ್ಸವ ಅದ್ದೂರಿ ಆಚರಣೆಗೆ ಪೂರ್ವಭಾವಿ ಸಭೆ

ದೇವದುರ್ಗ: ನವೆಂಬರ್ 1ರಂದು ನಡೆಯಲಿರುವ ಕನ್ನಡ ರಾಜ್ಯೋತ್ಸವವನ್ನು ತಾಲೂಕು ಆಡಳಿತದ ವತಿಯಿಂದ ಅದ್ದೂರಿಯಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ತಹಸೀಲ್ದಾರ್ ನಾಗಮ್ಮ ಕಟ್ಟಿಮನಿ ಅಧಿಕಾರಿಗಳಿಗೆ ಸೂಚಿಸಿದರು.



ಪಟ್ಟಣದ ಮಿನಿ ವಿಧಾನಸೌಧದ ಸಭಾಂಗಣದಲ್ಲಿ ತಾಲೂಕು ಆಡಳಿತದ ವತಿಯಿಂದ ಕನ್ನಡ ರಾಜ್ಯೋತ್ಸವ ಆಚರಣೆ ಕುರಿತು ಆಯೋಜಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕನ್ನಡ ನಾಡು, ನುಡಿ, ಸಂಸ್ಕೃತಿ ಹಾಗೂ ಪರಂಪರೆಯನ್ನು ಪ್ರತಿಬಿಂಬಿಸುವ ರೀತಿಯಲ್ಲಿ ರಾಜ್ಯೋತ್ಸವ ಕಾರ್ಯಕ್ರಮವನ್ನು ಆಯೋಜಿಸಬೇಕು. ಕಾರ್ಯಕ್ರಮದ ಯಶಸ್ಸಿಗೆ ವಿವಿಧ ಇಲಾಖೆಗಳ ಅಧಿಕಾರಿಗಳು, ಕನ್ನಡಪರ ಸಂಘಟನೆಗಳು ಹಾಗೂ ಸಾರ್ವಜನಿಕರು ಸಹಕಾರ ನೀಡಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಭಾಗವಹಿಸಿದ್ದ ವಿವಿಧ ಕನ್ನಡಪರ ಸಂಘಟನೆಗಳ ಮುಖಂಡರು ಹಾಗೂ ಸಾಹಿತಿಗಳು ರಾಜ್ಯೋತ್ಸವ ಆಚರಣೆ ಕುರಿತು ತಮ್ಮ ಅಭಿಪ್ರಾಯ ಮತ್ತು ಸಲಹೆಗಳನ್ನು ವ್ಯಕ್ತಪಡಿಸಿದರು. ಅವುಗಳ ಆಧಾರದ ಮೇಲೆ ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ಆಯೋಜಿಸಲು ನಿರ್ಧರಿಸಲಾಯಿತು.

ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಎಚ್. ಶಿವರಾಜ ಮಾತನಾಡಿ, ರಾಜ್ಯೋತ್ಸವದ ವೇದಿಕೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಕನ್ನಡ ಭಾಷೆ, ನಾಡು, ನುಡಿ ಮತ್ತು ಸಂಸ್ಕೃತಿಗೆ ಸಂಬಂಧಿಸಿದ ಗೀತೆಗಳಿಗೆ ಮಾತ್ರ ಅವಕಾಶ ನೀಡಬೇಕು. ನವೆಂಬರ್ ತಿಂಗಳಲ್ಲಿ ಚಿತ್ರಮಂದಿರಗಳಲ್ಲಿ ಕನ್ನಡ ಚಲನಚಿತ್ರಗಳ ಪ್ರದರ್ಶನಕ್ಕೆ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

ತಾಲೂಕಿನಲ್ಲಿ ಕಲೆ, ಸಾಹಿತ್ಯ, ಸಂಗೀತ, ಕ್ರೀಡೆ, ಜಾನಪದ, ರಂಗಭೂಮಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಾಧಕರನ್ನು ಗುರುತಿಸಿ ರಾಜ್ಯೋತ್ಸವದ ಸಂದರ್ಭದಲ್ಲಿ ಸನ್ಮಾನಿಸಬೇಕು. ಇದರಿಂದ ಸ್ಥಳೀಯ ಪ್ರತಿಭೆಗಳಿಗೆ ಪ್ರೋತ್ಸಾಹ ದೊರೆಯುವುದರ ಜೊತೆಗೆ ಕನ್ನಡ ನಾಡಿನ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ ಬೆಳೆಸಲು ಸಹಕಾರಿಯಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ರಾಜ್ಯೋತ್ಸವ ಕಾರ್ಯಕ್ರಮ ನಡೆಯುವ ವೇದಿಕೆಗೆ ಪುರಸಭೆ ಆಡಳಿತದ ವತಿಯಿಂದ ಸುಣ್ಣಬಣ್ಣ ಬಳಿದು ಅಚ್ಚುಕಟ್ಟಾಗಿ ಸಿದ್ಧಪಡಿಸಬೇಕು. ಕಾರ್ಯಕ್ರಮಕ್ಕೆ ಆಗಮಿಸುವ ವಿವಿಧ ಶಾಲೆಗಳ ವಿದ್ಯಾರ್ಥಿಗಳಿಗೆ ಸುರಕ್ಷಿತ ಸಂಚಾರ ವ್ಯವಸ್ಥೆ ಕಲ್ಪಿಸಬೇಕು. ಪೊಲೀಸ್ ಇಲಾಖೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡು ಕಾರ್ಯಕ್ರಮ ಸುಗಮವಾಗಿ ನಡೆಯುವಂತೆ ನೋಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ರಾಯಚೂರು ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ಬಸವರಾಜ ಬ್ಯಾಗವಾಟ್ ಮಾತನಾಡಿ, ಕನ್ನಡ ರಾಜ್ಯೋತ್ಸವವನ್ನು ಕೇವಲ ವೇದಿಕೆ ಕಾರ್ಯಕ್ರಮಕ್ಕೆ ಸೀಮಿತಗೊಳಿಸದೆ ವಿದ್ಯಾರ್ಥಿಗಳಲ್ಲಿ ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಬಗ್ಗೆ ಅಭಿಮಾನ ಮೂಡಿಸುವ ರೀತಿಯಲ್ಲಿ ಆಚರಿಸಬೇಕು. ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಕನ್ನಡ ನಾಡು, ನುಡಿಗೆ ಸಂಬಂಧಿಸಿದ ಪ್ರಬಂಧ, ಭಾಷಣ, ಗಾಯನ ಹಾಗೂ ವಿವಿಧ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಿ ವಿಜೇತರಿಗೆ ಬಹುಮಾನ ವಿತರಿಸಬೇಕು ಎಂದು ಸಲಹೆ ನೀಡಿದರು.

ಸಭೆಯಲ್ಲಿ ಭೀಮರಾಯ ನಾಯಕ, ಹನುಮಂತರಾಯ ಶಾಖೆ, ರಾಜಕುಮಾರ ಧೋನಿ, ಪೊಲೀಸ್ ಸಬ್ ಇನ್‌ಸ್ಪೆಕ್ಟರ್ ಹಸೀನಾ ಬೇಗಂ, ಕೆ. ಹಂಪಯ್ಯ, ಪುರಸಭೆ ಮುಖ್ಯಾಧಿಕಾರಿ ಪ್ರವೀಣಕುಮಾರ ಯಡ್ರಾಮಿ, ರವಿಕುಮಾರ ಬಲ್ಲಿದವ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಕನ್ನಡಪರ ಸಂಘಟನೆಗಳ ಮುಖಂಡರಾದ ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷ ಡಿ. ಶ್ರೀನಿವಾಸ್, ಬಸವರಾಜ ಗೋಪಾಲಪುರ, ನಂದಪ್ಪ, ಪತ್ರಕರ್ತ ರಂಗನಾಥ ಕೊಂಬಿನ, ಪ್ರಾಚಾರ್ಯ ಶ್ರೀಕಾಂತ ಬಿಲ್ಲವ, ಅಲ್ಲಾವುದ್ದೀನ್, ಟಿ. ಜಯರಾಜ, ಶಿವಕುಮಾರ ಚಲವಾದಿ ಸೇರಿದಂತೆ ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ಉಪ್ಪಾರವಾಡಿ ಶ್ರೀಲಕ್ಷ್ಮೀವೆಂಕಟೇಶ್ವರ ದೇವಸ್ಥಾನದಲ್ಲಿ ನವರಾತ್ರಿ ವಾಹನೋತ್ಸವ

ರಾಯಚೂರು, ಅ.14: ನಗರದ ಉಪ್ಪಾರವಾಡಿ ಬೃಹಸ್ಪತಿವಾರಪೇಟೆಯ ಶ್ರೀ ಲಕ್ಷ್ಮೀವೆಂಕಟೇಶ್ವರ ದೇವಸ್ಥಾನದಲ್ಲಿ 55ನೇ ವರ್ಷದ ನವರಾತ್ರಿ ಉತ್ಸವದ ಅಂಗವಾಗಿ ಬುಧವಾರ ಚಂದ್ರ ವಾಹನೋತ್ಸವವನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು.





ನವರಾತ್ರಿ ಮಹೋತ್ಸವದ ಪ್ರಯುಕ್ತ ದೇವಸ್ಥಾನದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ದೇವರಿಗೆ ವಿಶೇಷ ಪೂಜೆ ಹಾಗೂ ಮಂಗಳಾರತಿ ನೆರವೇರಿಸಲಾಯಿತು. ಬೆಳಗ್ಗೆಯಿಂದಲೇ ದೇವಸ್ಥಾನಕ್ಕೆ ಆಗಮಿಸಿದ ಭಕ್ತರು ಶ್ರೀ ಲಕ್ಷ್ಮೀವೆಂಕಟೇಶ್ವರ ಸ್ವಾಮಿಯ ದರ್ಶನ ಪಡೆದು ಪೂಜೆ ಸಲ್ಲಿಸಿದರು.

ಸಂಜೆ ದೇವಸ್ಥಾನದಿಂದ ಚಂದ್ರ ವಾಹನೋತ್ಸವದ ಮೆರವಣಿಗೆ ಭಜನೆ ಹಾಗೂ ಕಳಸ ಹೊತ್ತ ಮಹಿಳೆಯರೊಂದಿಗೆ ಸಡಗರ ಸಂಭ್ರಮದಿಂದ ಆರಂಭವಾಯಿತು. ಭಕ್ತರ ಭಜನೆ ಹಾಗೂ ದೇವರ ನಾಮಸ್ಮರಣೆಯೊಂದಿಗೆ ಮೆರವಣಿಗೆಯು ಗೀತಾಮಂದಿರ ರಸ್ತೆಯವರೆಗೆ ಸಾಗಿತು. ಬಳಿಕ ಪ್ರಮುಖ ಮಾರ್ಗಗಳ ಮೂಲಕ ಮರಳಿ ದೇವಸ್ಥಾನಕ್ಕೆ ಆಗಮಿಸಿತು.

ಮೆರವಣಿಗೆಯ ನಂತರ ದೇವಸ್ಥಾನದ ಅರ್ಚಕರು ವಿವಿಧ ಧಾರ್ಮಿಕ ವಿಧಿವಿಧಾನಗಳನ್ನು ನೆರವೇರಿಸಿ ವಿಶೇಷ ಪೂಜೆ ಹಾಗೂ ಮಹಾಮಂಗಳಾರತಿ ಸಲ್ಲಿಸಿದರು. ಬಳಿಕ ಭಕ್ತಾದಿಗಳಿಗೆ ಪ್ರಸಾದ ವಿತರಿಸಲಾಯಿತು.

ನವರಾತ್ರಿ ಉತ್ಸವದ ಹಿನ್ನೆಲೆಯಲ್ಲಿ ದೇವಸ್ಥಾನದಲ್ಲಿ ಭಕ್ತಿಭಾವದ ವಾತಾವರಣ ನಿರ್ಮಾಣವಾಗಿದ್ದು, ಬಡಾವಣೆಯ ನಿವಾಸಿಗಳು ಹಾಗೂ ಸುತ್ತಮುತ್ತಲಿನ ಪ್ರದೇಶಗಳ ಭಕ್ತರು ಉತ್ಸವದಲ್ಲಿ ಪಾಲ್ಗೊಂಡು ದೇವರ ದರ್ಶನ ಪಡೆದರು.

ಈ ಸಂದರ್ಭದಲ್ಲಿ ದೇವಸ್ಥಾನದ ಪದಾಧಿಕಾರಿಗಳು, ಬಡಾವಣೆಯ ಹಿರಿಯರು, ಮಹಿಳೆಯರು, ಯುವಕರು ಹಾಗೂ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

## ನಾಗೇಶ್ವರಿ ದೇವಸ್ಥಾನದಲ್ಲಿ ನವರಾತ್ರೋತ್ಸವ ಅಂಗವಾಗಿ ವಿಶೇಷ ಪೂಜೆ



ಲಿಂಗಸುಗೂರು: ಪಟ್ಟಣದ ಹೊರವಲಯದ ಕೇಂಬ್ರಿಡ್ಜ್ ಶಾಲೆ ಸಮೀಪವಿರುವ ಶ್ರೀ ನಾಗೇಶ್ವರಿ ದೇವಸ್ಥಾನದಲ್ಲಿ ನವರಾತ್ರೋತ್ಸವ ಹಾಗೂ ದಸರಾ ಹಬ್ಬದ ಪ್ರಯುಕ್ತ 11 ದಿನಗಳ ಕಾಲ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ನವರಾತ್ರೋತ್ಸವದ ಅಂಗವಾಗಿ ಪ್ರತಿದಿನ ದೇವಿಗೆ ದೀಪಾರಾಧನೆ, ಅಭಿಷೇಕ ಹಾಗೂ ವಿಶೇಷ ಪೂಜೆಗಳನ್ನು ಶ್ರದ್ಧಾಭಕ್ತಿಯಿಂದ ನೆರವೇರಿಸಲಾಗುವುದು ಎಂದು ದೇವಸ್ಥಾನದ ಪ್ರಧಾನ ಅರ್ಚಕ ಕುಪ್ಪನಗೌಡ ತಿಳಿಸಿದರು.

ದಸರಾ ಹಬ್ಬದ ಹಿನ್ನೆಲೆಯಲ್ಲಿ 11 ದಿನಗಳ ಕಾಲ ದೇವಿಗೆ ವಿಶೇಷ ಪೂಜಾ ಕೈಂಕರ್ಯಗಳು ನಡೆಯಲಿದ್ದು, ಭಕ್ತರು ದೇವಿಯ ದರ್ಶನ ಪಡೆದು ಪೂಜೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು.

## 2026ನೇ ಸಾಲಿನ ಪರಮಶ್ರೀ ಪ್ರಶಸ್ತಿಗೆ ಪರಿಸರ ಪ್ರೇಮಿ ಅಮರೇಗೌಡ ಮಲ್ಲಾಪುರ ಆಯ್ಕೆ



ತುರವಿಹಾಳ: ಪಟ್ಟಣದ ಶ್ರೀ ಸದ್ಗುರು ಸರ್ವೇಶ್ವರ ಮಠದ ವತಿಯಿಂದ ನೀಡಲಾಗುವ 2026ನೇ ಸಾಲಿನ ಪ್ರತಿಷ್ಠಿತ ಪರಮಶ್ರೀ ಪ್ರಶಸ್ತಿಗೆ ಪರಿಸರ ಪ್ರೇಮಿ, ಕರ್ನಾಟಕ ಪರಿಸರ ರಾಜ್ಯ ಪ್ರಶಸ್ತಿ ಹಾಗೂ ಕರ್ನಾಟಕ ಇಂದಿರಾ ಪ್ರಿಯದರ್ಶಿನಿ ಪ್ರಶಸ್ತಿ ಪುರಸ್ಕೃತ, ವನಸಿರಿ ಫೌಂಡೇಶನ್ ರಾಯಚೂರು ಸಂಸ್ಥಾಪಕ ಅಧ್ಯಕ್ಷ ಅಮರೇಗೌಡ ಮಲ್ಲಾಪುರ ಅವರನ್ನು ಆಯ್ಕೆ ಮಾಡಲಾಗಿದೆ.

ಶ್ರೀಮಠದಲ್ಲಿ ಅಕ್ಟೋಬರ್ 25ರಂದು ಭಾನುವಾರ ನಡೆಯಲಿರುವ 177ನೇ ಜಾತ್ರಾ ಮಹೋತ್ಸವ ಹಾಗೂ 117ನೇ ವಚನ ಪ್ರವಚನ ಕಾರ್ಯಕ್ರಮದ ಅಂಗವಾಗಿ ಈ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುವುದು. ಪರಿಸರ ಸಂರಕ್ಷಣೆ, ಗಿಡಮರಗಳ ಪೋಷಣೆ ಹಾಗೂ ಸಮಾಜಮುಖಿ ಸೇವಾ ಚಟುವಟಿಕೆಗಳಲ್ಲಿ ಅಮರೇಗೌಡ ಮಲ್ಲಾಪುರ ಅವರು ಸಲ್ಲಿಸಿರುವ ಸೇವೆಯನ್ನು ಗುರುತಿಸಿ ಶ್ರೀಮಠದ ವತಿಯಿಂದ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಶ್ರೀಮಠದ ಸದ್ಗುರು ಶ್ರೀ ಗುರು ಗುಂಡಯ್ಯ ಅಪ್ಪಯ್ಯನವರು, ಮಾತೋಶ್ರೀ ಶ್ರೀ ಈರಮ್ಮ ಅಮ್ಮನವರು ಹಾಗೂ ದಾಸೋಹ ಮೂರ್ತಿ ಶ್ರೀ ಗುರು ರಾಚಯ್ಯ ತಾತನವರ ಪುಣ್ಯಾರಾಧನೆಯ ಅಂಗವಾಗಿ ಜಾತ್ರಾ ಮಹೋತ್ಸವವನ್ನು ಹಮ್ಮಿಕೊಳ್ಳಲಾಗಿದೆ. ಈ ಸಂದರ್ಭದಲ್ಲಿ ವಚನ ಪ್ರವಚನ, ತುಲಾಭಾರ ಹಾಗೂ ನಿಶ್ಯಬ್ದ ಬ್ರಹ್ಮ ವಚನ ಸಂಪುಟ ಪುಸ್ತಕ ಲೋಕಾರ್ಪಣೆ ಸೇರಿದಂತೆ ವಿವಿಧ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

ಕಾರ್ಯಕ್ರಮಕ್ಕೆ ಅಮರೇಗೌಡ ಮಲ್ಲಾಪುರ ಅವರನ್ನು ವಿಶೇಷ ಆಹ್ವಾನಿತರಾಗಿ ಆಹ್ವಾನಿಸಲಾಗಿದ್ದು, ಜಾತ್ರಾ ಮಹೋತ್ಸವದ ಸಂದರ್ಭದಲ್ಲಿ ಪರಮಶ್ರೀ ಪ್ರಶಸ್ತಿ ನೀಡಿ ಗೌರವಿಸಲು ಶ್ರೀಮಠ ನಿರ್ಧರಿಸಿದೆ.

ಈ ಹಿನ್ನೆಲೆಯಲ್ಲಿ ಶ್ರೀಮಠದ ಸದ್ಗುರು ಶ್ರೀ ಗುರು ಗುಂಡಯ್ಯ ಅಪ್ಪಯ್ಯನವರು ಹಾಗೂ ಭಕ್ತವೃಂದದವರು ಸಿಂಧನೂರಿನ ವನಸಿರಿ ಫೌಂಡೇಶನ್ ಕಾರ್ಯಾಲಯಕ್ಕೆ ಭೇಟಿ ನೀಡಿ, ಅಮರೇಗೌಡ ಮಲ್ಲಾಪುರ ಅವರಿಗೆ ವಿಶೇಷ ಆಹ್ವಾನ ಪತ್ರಿಕೆ ನೀಡಿ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಆಹ್ವಾನಿಸಿದರು.

ಪರಿಸರ ಸಂರಕ್ಷಣೆಯೊಂದಿಗೆ ಸಾಮಾಜಿಕ ಸೇವೆಯಲ್ಲಿ ತೊಡಗಿಸಿಕೊಂಡಿರುವ ಅಮರೇಗೌಡ ಮಲ್ಲಾಪುರ ಅವರಿಗೆ ಶ್ರೀಮಠದ ವತಿಯಿಂದ ಪ್ರಶಸ್ತಿ ಘೋಷಿಸಿರುವುದು ಅವರ ಸೇವೆಗೆ ದೊರೆತ ಗೌರವವಾಗಿದೆ.

## ಅ. 16ರಂದು ಎಲ್‌ವಿಡಿ ಕಾಲೇಜಿನಲ್ಲಿ ಉದ್ಯೋಗ ಮೇಳ

ರಾಯಚೂರು ಅ. 14 (ಕರ್ನಾಟಕ ವಾರ್ತೆ): ರಾಯಚೂರಿನ ಶ್ರೀಲಕ್ಷ್ಮಿ ವೆಂಕಟೇಶ ದೇಸಾಯಿ ಕಾಲೇಜು (ಎಲ್‌ವಿಡಿ) ಹಾಗೂ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಇವರ ಸಂಯುಕ್ತಾಶ್ರಯದಲ್ಲಿ ಅಕ್ಟೋಬರ್ 16ರ ಬೆಳಿಗ್ಗೆ 10ಗಂಟೆಗೆ ಕಾಲೇಜಿನ ಆವರಣದಲ್ಲಿ ಉದ್ಯೋಗ ಮೇಳವನ್ನು ಹಮ್ಮಿಕೊಳ್ಳಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಕೋರಲಾಗಿದೆ.

ನೇರ ಸಂದರ್ಶನದಲ್ಲಿ ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರ.

ಅರ್ಹತೆಗಳು: ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ, ಡಿಪ್ಲೊಮಾ ಮತ್ತು ಆಸಕ್ತ 18 ರಿಂದ 28 ವರ್ಷಗಳ ವರಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ.

ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾರ್ಕ್ಸ ಪ್ರತಿಗಳು ಮತ್ತು ತಮ್ಮ ಬಯೋಡೆಟಾ, ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆರ್ಕ್ಸ, ನೆಲ ಮಹಡಿ, ಗೂಡ್ ಶೆಡ್ ರಸ್ಥೆ, ಸ್ಟೇಷನ್ ಏರಿಯಾ, ರಾಯಚೂರು ಹಾಗೂ ದೂರವಾಣಿ ಸಂಖ್ಯೆ 08532-231684, 9008211750, 991693166 ಗ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನಕುಮಾರ್ ಸಂಗೇಪಾಗ್‌ಅವರು ಪ್ರಕಟಣಯಲ್ಲಿ ತಿಳಿಸಿದ್ದಾರೆ.

# ಅವೈಜ್ಞಾನಿಕ ವಾರಬಂದಿ ಪದ್ಧತಿ ರದ್ದುಪಡಿಸಿ ಬೆಳೆಗಳಿಗೆ ನೀರು ಹರಿಸಲು ಶಾಸಕಿ ಕರೆಮ್ಮ ಆಗ್ರಹ

ದೇವದುರ್ಗ: ನಾರಾಯಣಪುರ ಬಲದಂಡೆ ಕಾಲುವೆ ವ್ಯಾಪ್ತಿಯಲ್ಲಿ ಜಾರಿಯಲ್ಲಿರುವ ಅವೈಜ್ಞಾನಿಕ ವಾರಬಂದಿ ಪದ್ಧತಿಯಿಂದ ರೈತರು ತೀವ್ರ ತೊಂದರೆ ಅನುಭವಿಸುತ್ತಿದ್ದು, ಬೆಳೆಗಳ ಸ್ಥಿತಿಗತಿ ಹಾಗೂ ನೀರಿನ ಲಭ್ಯತೆಗೆ ಅನುಗುಣವಾಗಿ ಕಾಲುವೆಗಳಿಗೆ ನೀರು ಹರಿಸಬೇಕು. ಅಕ್ಟೋಬರ್ 15ರಂದು ಆಲಮಟ್ಟಿಯಲ್ಲಿ ನಡೆಯಲಿರುವ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ಈ ಕುರಿತು ಪ್ರಸ್ತಾಪಿಸಿ ರೈತರ ಹಿತದೃಷ್ಟಿಯಿಂದ ಸೂಕ್ತ ನಿರ್ಧಾರ ಕೈಗೊಳ್ಳುವಂತೆ ಒತ್ತಾಯಿಸಲಾಗುವುದು ಎಂದು ಶಾಸಕಿ ಕರೆಮ್ಮ ಗೋಪಾಲಕೃಷ್ಣ ತಿಳಿಸಿದರು.



ಪಟ್ಟಣದ ತಮ್ಮ ನಿವಾಸದಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿದ ಅವರು, ತಾಲೂಕಿನ ವಿವಿಧ ಗ್ರಾಮಗಳಲ್ಲಿ ನೀರಾವರಿ ಸಮಸ್ಯೆ ದಿನದಿಂದ ದಿನಕ್ಕೆ ಉಲ್ಬಣಿಸುತ್ತಿದೆ. ಈಗಾಗಲೇ ಭತ್ತ, ಹತ್ತಿ, ಮೆಣಸಿನಕಾಯಿ ಸೇರಿದಂತೆ ಹಲವು ಬೆಳೆಗಳನ್ನು ಬಿತ್ತನೆ ಮಾಡಿರುವ ರೈತರು ನೀರಿಗಾಗಿ ಪರದಾಡುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ನೀರಾವರಿ ಇಲಾಖೆಯ ಅಧಿಕಾರಿಗಳು ಪರಸ್ಪರ ಹೊಂದಾಣಿಕೆಯಿಂದ ಕಾರ್ಯನಿರ್ವಹಿಸದೆ ವಿಭಿನ್ನ ಮಾಹಿತಿ ನೀಡುತ್ತಿರುವುದು ರೈತರಲ್ಲಿ ಗೊಂದಲ ಸೃಷ್ಟಿಸಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಕಾಲುವೆಗಳಲ್ಲಿ ನೀರು ಹರಿಯುತ್ತಿದ್ದರೂ ಕೊನೆಯ ಭಾಗದ ಜಮೀನುಗಳಿಗೆ ಅಗತ್ಯ ಪ್ರಮಾಣದಲ್ಲಿ ತಲುಪುತ್ತಿಲ್ಲ. ವಿಶೇಷವಾಗಿ ಜಾಡಲದಿನ್ನಿ, ಮಲ್ಲೇದೇವರಗುಡ್ಡ ಹಾಗೂ ಸುತ್ತಮುತ್ತಲಿನ ಗ್ರಾಮಗಳ ರೈತರು ನೀರಿನ ಅಭಾವ ಎದುರಿಸುತ್ತಿದ್ದಾರೆ. ಬೆಳೆಗಳನ್ನು ಉಳಿಸಿಕೊಳ್ಳಲು ರೈತರು ಹರಸಾಹಸ ಪಡುತ್ತಿದ್ದು, ಅವರ ಸಂಕಷ್ಟಕ್ಕೆ ಅಧಿಕಾರಿಗಳು ತಕ್ಷಣ ಸ್ಪಂದಿಸಬೇಕಾಗಿದೆ. ಕಳೆದ ಎರಡು ಮೂರು ದಿನಗಳಿಂದ ರೈತರಿಂದ ನಿರಂತರ ದೂರುಗಳು ಬರುತ್ತಿರುವ ಹಿನ್ನೆಲೆಯಲ್ಲಿ ರಾತ್ರಿ ವೇಳೆಯಲ್ಲಿಯೂ ಕಾಲುವೆ ಪ್ರದೇಶಗಳಿಗೆ ತೆರಳಿ ನೀರಿನ ಹರಿವನ್ನು ಪರಿಶೀಲಿಸಲಾಗಿದೆ ಎಂದು ಹೇಳಿದರು.

ಕಾಲುವೆಗಳ ನವೀಕರಣ ಕಾಮಗಾರಿಗಳು ಪೂರ್ಣಗೊಳ್ಳದೆ ಮಧ್ಯದಲ್ಲಿಯೇ ಸ್ಥಗಿತಗೊಂಡಿರುವುದರಿಂದ ನೀರಿನ ಸುಗಮ ಹರಿವಿಗೆ ಅಡ್ಡಿಯಾಗುತ್ತಿದೆ ಎಂಬ ದೂರುಗಳೂ ಕೇಳಿಬಂದಿವೆ. ಕಾಮಗಾರಿಗಳ ವಿಳಂಬ ಹಾಗೂ ನೀರು ವಿತರಣೆಯಲ್ಲಿನ ಲೋಪಗಳ ಕುರಿತು ಸಂಬಂಧಪಟ್ಟ ಸಚಿವರ ಗಮನ ಸೆಳೆದು ಪರಿಹಾರಕ್ಕೆ ಪ್ರಯತ್ನಿಸಲಾಗುವುದು ಎಂದರು.

ರೈತರ ನೀರಾವರಿ ಸಮಸ್ಯೆ ಕುರಿತು ಮೇಲಧಿಕಾರಿಗಳೊಂದಿಗೆ ನಿರಂತರ ಸಂಪರ್ಕ ಸಾಧಿಸಿ ಮನವರಿಕೆ ಮಾಡಿಕೊಟ್ಟ ಪರಿಣಾಮ ಕಾಲುವೆಗೆ ಹೆಚ್ಚುವರಿಯಾಗಿ 200 ಕ್ಯೂಸೆಕ್ ನೀರು ಬಿಡುಗಡೆ ಮಾಡಲಾಗಿದೆ. ಆದರೆ ಕೇವಲ ಹೆಚ್ಚುವರಿ ನೀರು ಹರಿಸುವುದರಿಂದ ಸಮಸ್ಯೆ ಬಗೆಹರಿಯುವುದಿಲ್ಲ. ಆ ನೀರು ಕೊನೆಯ ಭಾಗದ ರೈತರ ಜಮೀನುಗಳಿಗೂ ತಲುಪುವಂತೆ ನೋಡಿಕೊಳ್ಳುವುದು ಅಧಿಕಾರಿಗಳ ಕರ್ತವ್ಯವಾಗಿದೆ ಎಂದು ತಿಳಿಸಿದರು.

ನೀರಿನ ಪ್ರಮಾಣ ಹಾಗೂ ವಿತರಣೆಯ ಕುರಿತು ರೈತರಿಗೆ ಸ್ಪಷ್ಟ ಮಾಹಿತಿ ನೀಡಬೇಕು. ಒಂದೊಂದು ಹಂತದ ಅಧಿಕಾರಿಗಳು ಒಂದೊಂದು ರೀತಿಯ ಹೇಳಿಕೆ ನೀಡುವುದನ್ನು ನಿಲ್ಲಿಸಬೇಕು. ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರುವ ಅಥವಾ ರೈತರಿಗೆ ತಪ್ಪು ಮಾಹಿತಿ ನೀಡಿ ದಿಕ್ಕುತಪ್ಪಿಸುವ ಅಧಿಕಾರಿಗಳ ವಿರುದ್ಧ ಸರ್ಕಾರಕ್ಕೆ ಪತ್ರ ಬರೆದು ಕ್ರಮಕ್ಕೆ ಆಗ್ರಹಿಸಲಾಗುವುದು ಎಂದು ಎಚ್ಚರಿಸಿದರು.

ಮುಂಗಾರು ಹಾಗೂ ಹಿಂಗಾರು ಹಂಗಾಮಿನಲ್ಲಿ ಬೆಳೆಯುವ ಬೆಳೆಗಳ ಸ್ವರೂಪವನ್ನು ಗಮನದಲ್ಲಿಟ್ಟುಕೊಂಡು ನೀರು ವಿತರಣೆಗೆ ಯೋಜನೆ ರೂಪಿಸುವ ಅಗತ್ಯವಿದೆ. ವಿಶೇಷವಾಗಿ ಮೆಣಸಿನಕಾಯಿ ಬೆಳೆ ಜನವರಿ ಅಥವಾ ಫೆಬ್ರವರಿಯಲ್ಲಿ ಕಟಾವಿಗೆ ಬರುವುದರಿಂದ ಅಲ್ಲಿಯವರೆಗೆ ಅಗತ್ಯ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಬೆಳೆಗಳಿಗೆ ಅತ್ಯಂತ ಅವಶ್ಯಕವಾಗಿರುವ ಸಮಯದಲ್ಲಿಯೇ ನೀರು ಸ್ಥಗಿತಗೊಂಡರೆ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕುವ ಅಪಾಯವಿದೆ ಎಂದು ಆತಂಕ ವ್ಯಕ್ತಪಡಿಸಿದರು.

ರೈತರು ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಕೃಷಿ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಕೆಲವರು ಸಾಲ ಮಾಡಿಕೊಂಡು ಬೆಳೆ ಬೆಳೆದಿದ್ದಾರೆ. ಇಂತಹ ಸಂದರ್ಭದಲ್ಲಿ ನೀರಾವರಿ ವ್ಯವಸ್ಥೆಯಲ್ಲಿನ ಅವ್ಯವಸ್ಥೆಯಿಂದ ಬೆಳೆ ಹಾನಿಯಾದರೆ ರೈತರ ಬದುಕಿನ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಆದ್ದರಿಂದ ಅಧಿಕಾರಿಗಳು ತಾಂತ್ರಿಕ ಕಾರಣಗಳನ್ನು ಮುಂದಿಟ್ಟುಕೊಂಡು ಜವಾಬ್ದಾರಿಯಿಂದ ನುಣುಚಿಕೊಳ್ಳದೆ, ರೈತರ ಜಮೀನುಗಳಿಗೆ ಸಮರ್ಪಕವಾಗಿ ನೀರು ತಲುಪಿಸಲು ಮುಂದಾಗಬೇಕು ಎಂದು ಆಗ್ರಹಿಸಿದರು.

ಆಲಮಟ್ಟಿಯಲ್ಲಿ ನಡೆಯಲಿರುವ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ತಾಲೂಕಿನ ಕೊನೆಯ ಭಾಗದ ರೈತರು ಎದುರಿಸುತ್ತಿರುವ ಸಮಸ್ಯೆಗಳು, ಕಾಲುವೆಗಳ ನಿರ್ವಹಣೆ, ಅಪೂರ್ಣ ಕಾಮಗಾರಿಗಳು ಹಾಗೂ ವಾರಬಂದಿ ಪದ್ಧತಿಯಿಂದ ಉಂಟಾಗುತ್ತಿರುವ ತೊಂದರೆಗಳ ಕುರಿತು ಸಮಗ್ರವಾಗಿ ಚರ್ಚಿಸಲಾಗುವುದು. ಲಭ್ಯವಿರುವ ನೀರನ್ನು ವೈಜ್ಞಾನಿಕವಾಗಿ ಹಂಚಿಕೆ ಮಾಡುವ ಮೂಲಕ ರೈತರ ಬೆಳೆಗಳನ್ನು ರಕ್ಷಿಸಲು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಲಾಗುವುದು ಎಂದು ವಿವರಿಸಿದರು.

ರೈತರ ಹಿತಾಸಕ್ತಿ ಕಾಪಾಡುವ ವಿಚಾರದಲ್ಲಿ ಯಾವುದೇ ರಾಜಿ ಮಾಡಿಕೊಳ್ಳುವ ಪ್ರಶ್ನೆಯೇ ಇಲ್ಲ. ಸಮಸ್ಯೆಗಳಿಗೆ ಅಧಿಕಾರಿಗಳು ಹಾಗೂ ಸರ್ಕಾರ ಸೂಕ್ತವಾಗಿ ಸ್ಪಂದಿಸದಿದ್ದರೆ ರೈತರೊಂದಿಗೆ ಬೀದಿಗಿಳಿದು ಹೋರಾಟ ನಡೆಸುವುದಕ್ಕೂ ಸಿದ್ಧವಿದ್ದೇವೆ. ತಾಲೂಕಿನ ನೀರಾವರಿ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ದೊರಕಿಸುವ ನಿಟ್ಟಿನಲ್ಲಿ ಪ್ರಯತ್ನ ಮುಂದುವರಿಸಲಾಗುವುದು ಎಂದು ಶಾಸಕಿ ಕರೆಮ್ಮ ಗೋಪಾಲಕೃಷ್ಣ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಜೆಡಿಎಸ್ ಅಧ್ಯಕ್ಷ ಬಸನಗೌಡ ದೇಸಾಯಿ, ಶರಬಣ್ಣ ಸಾಹು ಗಬ್ಬೂರು, ಸಿದ್ದಣ್ಣ ಗಣೇಕಲ್, ಇಸಾಕ್ ಮೇಸ್ತ್ರೀ, ರಂಗಮ್ಮ ಇರಬಗೇರಾ, ರಮೇಶ ರಾಮನಾಳ, ಶರಣಗೌಡ ಸುಂಕೇಶ್ವರಹಾಳ ಸೇರಿದಂತೆ ನೀರಾವರಿ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಹೆಣ್ಣು ಸಂಸಾರದ ಕಣ್ಣು, ಕುಟುಂಬದಲ್ಲಿ ಸಂಸ್ಕಾರಕ್ಕೆ ಆದ್ಯತೆ ನೀಡಿ: ಅನೀತಾ ಹಿರೇಮನಿ



ರಾಯಚೂರು: ಕುಟುಂಬದಲ್ಲಿ ಶಾಂತಿ, ನೆಮ್ಮದಿ ನೆಲೆಸಲು ಮಹಿಳೆಯರ ಪಾತ್ರ ಮಹತ್ವದ್ದಾಗಿದೆ. ಹಿರಿಯರನ್ನು ಗೌರವಿಸುವುದರ ಜೊತೆಗೆ ಮಕ್ಕಳಿಗೆ ಉತ್ತಮ ಶಿಕ್ಷಣ ಹಾಗೂ ಸಂಸ್ಕಾರ ನೀಡಿ ಸಮಾಜಕ್ಕೆ ಒಳ್ಳೆಯ ಪ್ರಜೆಗಳನ್ನಾಗಿ ರೂಪಿಸುವ ಜವಾಬ್ದಾರಿ ಕುಟುಂಬದ ಪ್ರತಿಯೊಬ್ಬರ ಮೇಲಿದೆ. ಹೆಣ್ಣು ಸಂಸಾರದ ಕಣ್ಣು ಎಂಬ ಮಾತಿನಂತೆ ಕುಟುಂಬವನ್ನು ಸನ್ಮಾರ್ಗದಲ್ಲಿ ಮುನ್ನಡೆಸುವಲ್ಲಿ ಮಹಿಳೆಯರ ಕೊಡುಗೆ ಅಪಾರವಾಗಿದೆ ಎಂದು ಜಿಲ್ಲಾ ಕಾರಾಗೃಹ ಅಧೀಕ್ಷಕಿ ಅನೀತಾ ಹಿರೇಮನಿ ಹೇಳಿದರು.

ನಗರದ ಮಾರುತಿ ನಗರ ಬಡಾವಣೆಯ ಶ್ರೀ ಗಿರಿ ಅಭಯ ಆಂಜನೇಯಸ್ವಾಮಿ ಮಂದಿರದಲ್ಲಿ ಆಯೋಜಿಸಿದ್ದ 59ನೇ ಶರಣ ಚಿಂತನ ಶಿವಾನುಭವ ಗೋಷ್ಠಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

12ನೇ ಶತಮಾನದಲ್ಲಿ ಬಸವಣ್ಣನವರು ಕಾಯಕ ಮತ್ತು ದಾಸೋಹ ತತ್ವಗಳ ಮೂಲಕ ಸಮಾಜದಲ್ಲಿ ಸಮಾನತೆ, ಮಾನವೀಯತೆ ಹಾಗೂ ನೈತಿಕ ಮೌಲ್ಯಗಳನ್ನು ಬಿತ್ತಿದರು. ಅನುಭವ ಮಂಟಪದಲ್ಲಿ ಶರಣರು ತಮ್ಮ ಕಾಯಕದ ಅನುಭವಗಳನ್ನು ಹಂಚಿಕೊಂಡು ವಚನಗಳ ಮೂಲಕ ಸಮಾಜಕ್ಕೆ ಮಾರ್ಗದರ್ಶನ ನೀಡಿದರು. ಅಂದಿನ ಅನುಭವ ಮಂಟಪವು ಸಮಾನತೆ ಮತ್ತು ವಿಚಾರ ವಿನಿಮಯಕ್ಕೆ ವೇದಿಕೆಯಾಗಿದ್ದು, ಇಂದಿನ ಪ್ರಜಾಪ್ರಭುತ್ವ ಹಾಗೂ ಸಂವಿಧಾನದ ಆಶಯಗಳಿಗೆ ಪೂರಕವಾದ ಚಿಂತನೆಗಳನ್ನು ಒಳಗೊಂಡಿತ್ತು ಎಂದು ತಿಳಿಸಿದರು.

ಬಟ್ಟೆ ಕೊಳೆಯಾದರೆ ಮಡಿವಾಳ ಶುಚಿಗೊಳಿಸುತ್ತಾನೆ. ಆದರೆ ಮನಸ್ಸು ಕಲುಷಿತವಾದರೆ ಅದನ್ನು ಶುದ್ಧಗೊಳಿಸುವುದು ಹೇಗೆ ಎಂಬ ಪ್ರಶ್ನೆಗೆ ಶರಣರ ಚಿಂತನೆಗಳು ಉತ್ತರ ನೀಡುತ್ತವೆ. ಇಂತಹ ಶಿವಾನುಭವ ಗೋಷ್ಠಿಗಳು ಮನುಷ್ಯನಲ್ಲಿ ವೈಚಾರಿಕತೆ, ಆತ್ಮಾವಲೋಕನ ಹಾಗೂ ನೈತಿಕ ಪ್ರಜ್ಞೆಯನ್ನು ಬೆಳೆಸುತ್ತವೆ. ಇಂದಿನ ದಿನಗಳಲ್ಲಿ ಕೌಟುಂಬಿಕ ಕಲಹಗಳು ಹೆಚ್ಚಾಗಿ ನ್ಯಾಯಾಲಯದ ಮೆಟ್ಟಿಲೇರುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಇದರಿಂದ ಕುಟುಂಬಗಳು ಆರ್ಥಿಕ ಹಾಗೂ ಮಾನಸಿಕ ಸಂಕಷ್ಟ ಅನುಭವಿಸುತ್ತಿವೆ. ಪರಸ್ಪರ ಪ್ರೀತಿ, ವಿಶ್ವಾಸ ಮತ್ತು ಹೊಂದಾಣಿಕೆಯಿಂದ ಬದುಕಿದಾಗ ಕುಟುಂಬದಲ್ಲಿ ನೆಮ್ಮದಿ ನೆಲೆಸುತ್ತದೆ ಎಂದು ಅಭಿಪ್ರಾಯಪಟ್ಟರು.

ಶರಣ ಹಡಪದ ಅಪ್ಪಣ್ಣನವರ ಜೀವನ ಮೌಲ್ಯಗಳು ಕುರಿತು ವಿಶೇಷ ಉಪನ್ಯಾಸ ನೀಡಿದ ವೇದಾಂತ ಪದವಿ ಕಾಲೇಜಿನ ಪ್ರಾಚಾರ್ಯ ಡಾ. ತಿಮ್ಮಯ್ಯ ಶೆಟ್ಟಿ ಇಲ್ಲೂರು, ಹನ್ನೆರಡನೇ ಶತಮಾನದ ಬಸವಾದಿ ಶರಣರಲ್ಲಿ ಹಡಪದ ಅಪ್ಪಣ್ಣ ಪ್ರಮುಖರಾಗಿದ್ದರು. ಅವರ ವಚನಗಳು ಮನುಷ್ಯನ ನಡತೆ, ನುಡಿ ಹಾಗೂ ಆಚಾರ-ವಿಚಾರಗಳ ಮಹತ್ವವನ್ನು ತಿಳಿಸುತ್ತವೆ. ವ್ಯಕ್ತಿಯನ್ನು ಬಾಹ್ಯ ವೇಷಭೂಷಣದಿಂದ ಅಳೆಯದೆ ಆತನ ನಡೆನುಡಿ ಮತ್ತು ಜೀವನ ಮೌಲ್ಯಗಳಿಂದ ಗುರುತಿಸಬೇಕು ಎಂಬ ಸಂದೇಶವನ್ನು ಶರಣರು ನೀಡಿದ್ದಾರೆ ಎಂದರು.

ಶರಣರ ತತ್ವಾದರ್ಶಗಳನ್ನು ಜನರಿಗೆ ಪರಿಚಯಿಸುವ ಉದ್ದೇಶದಿಂದ ನಿರಂತರವಾಗಿ ಶಿವಾನುಭವ ಗೋಷ್ಠಿ ಹಾಗೂ ಅನ್ನದಾಸೋಹ ಆಯೋಜಿಸುತ್ತಿರುವ ಸೇವಾ ಸಮಿತಿಯ ಕಾರ್ಯ ಶ್ಲಾಘನೀಯವಾಗಿದೆ. ಅಲ್ಲದೆ, ಅನುಭವ ಮಂಟಪ ನಿರ್ಮಾಣಕ್ಕೆ ಮುಂದಾಗಿರುವುದು ಸಂತಸದ ಸಂಗತಿ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಶ್ರೀ ಗಿರಿ ಅಭಯ ಆಂಜನೇಯಸ್ವಾಮಿ ಸೇವಾ ಸಮಿತಿ ಅಧ್ಯಕ್ಷ ಬಿ. ಬಸವರಾಜ್, ಕಳೆದ 58 ತಿಂಗಳಿಂದ ನಿರಂತರವಾಗಿ ಶರಣ ಚಿಂತನ ಗೋಷ್ಠಿ ಹಾಗೂ ಅನ್ನದಾಸೋಹ ನಡೆಸಿಕೊಂಡು ಬರಲಾಗುತ್ತಿದೆ. ವಿವಿಧ ಮಠಗಳ ಸ್ವಾಮೀಜಿಗಳು, ಹಿರಿಯ ಚಿಂತಕರು ಹಾಗೂ ಉಪನ್ಯಾಸಕರನ್ನು ಆಹ್ವಾನಿಸಿ ಶರಣರ ವಿಚಾರಧಾರೆಗಳನ್ನು ಜನರಿಗೆ ತಲುಪಿಸುವ ಪ್ರಯತ್ನ ಮಾಡಲಾಗುತ್ತಿದೆ ಎಂದರು.

ಮಂದಿರದ ಆವರಣದಲ್ಲಿ ನಿರ್ಮಿಸಲಾಗುತ್ತಿರುವ ಅನುಭವ ಮಂಟಪವನ್ನು ಮುಂದಿನ ದಿನಗಳಲ್ಲಿ ನಾಟಕ, ಸಂಗೀತ, ಸಾಹಿತ್ಯ, ಶರಣ ಚಿಂತನೆ ಸೇರಿದಂತೆ ವಿವಿಧ ಸಾಂಸ್ಕೃತಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳಿಗೆ ಮುಕ್ತವಾಗಿ ಬಳಸಲು ಅವಕಾಶ ಕಲ್ಪಿಸಲಾಗುವುದು. ಶರಣರ ಸಂದೇಶವನ್ನು ನಗರದ ಮನೆಮನೆಗೂ ತಲುಪಿಸುವುದು ಸಮಿತಿಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ನೂತನ ಎಲೆಕ್ಟ್ರಿಕಲ್ ಅಸೋಸಿಯೇಷನ್ ಅಧ್ಯಕ್ಷ ಶ್ರೀನಿವಾಸ ರೆಡ್ಡಿ, ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನೂತನ ಅಧ್ಯಕ್ಷ ರಾಮು ಗಾಣದಾಳ್, ಜಿಲ್ಲಾ ಪ್ರಾಥಮಿಕ ಜಿಪಿಟಿ ಶಿಕ್ಷಕರ ಸಂಘದ ಅಧ್ಯಕ್ಷ ರಮೇಶ, ರಾಜ್ಯ ಶಿಕ್ಷಕ ಪ್ರಶಸ್ತಿ ಪುರಸ್ಕೃತೆ ಸುಮಾ, ಕೃಷ್ಣಾ ಭಾಗ್ಯ ಜಲ ನಿಗಮದ ನಿವೃತ್ತ ಸಹಾಯಕ ಕಾರ್ಯಪಾಲಕ ಅಭಿಯಂತರ ಗುರುಲಿಂಗಪ್ಪ ಹಾಗೂ ಅಮಾವಾಸ್ಯೆಯ ಅನ್ನದಾಸೋಹ ಸೇವಾಕರ್ತರನ್ನು ಸನ್ಮಾನಿಸಿ ಗೌರವಿಸಲಾಯಿತು.

ವೇದಿಕೆಯಲ್ಲಿ ಬಿಜೆಪಿ ಪ್ರಧಾನ ಕಾರ್ಯದರ್ಶಿ ರವೀಂದ್ರ ಜಲ್ದಾರ್, ಹಡಪದ ಸಮಾಜದ ಮುಖಂಡ ಧನಂಜಯ, ಸೋಮಶೆಟ್ಟಿ ಶ್ರೀನಿವಾಸ, ಅನ್ನದಾಸೋಹ ಸಂಯೋಜಕ ಡಿ.ಬಿ. ಕಟ್ಟಿಮನಿ ಉಪಸ್ಥಿತರಿದ್ದರು.

ಕೆ. ಕರಿಯಪ್ಪ ಪ್ರಾರ್ಥಿಸಿದರು. ಷಣ್ಮುಖಪ್ಪ ವಲ್ಕಂದಿನ್ನಿ ಸ್ವಾಗತಿಸಿದರು. ಭೀಮಣ್ಣ ಗಂಗವಾರ ನಿರೂಪಿಸಿದರು. ಚಂದ್ರಶೇಖರ ಯಾಕ್ಲಾಸಪುರ ವಂದಿಸಿದರು. ಸೂರ್ಯೋದಯ ವಾಕಿಂಗ್ ಕ್ಲಬ್, ಶ್ರೀ ಗಿರಿ ಅಭಯ ಆಂಜನೇಯಸ್ವಾಮಿ ಸೇವಾ ಸಮಿತಿ, ಮಹಿಳಾ ಮಂಡಳಿ ಹಾಗೂ ಯುವ ಗಜಾನನ ಸಮಿತಿಯ ಪದಾಧಿಕಾರಿಗಳು, ಸದಸ್ಯರು ಮತ್ತು ಬಡಾವಣೆಯ ನಾಗರಿಕರು ಭಾಗವಹಿಸಿದ್ದರು.

## ಈಶ್ವರ ದೇವಸ್ಥಾನದಲ್ಲಿ ಶರನ್ನವರಾತ್ರಿ ಪುರಾಣ ಪ್ರವಚನ, ಸಾಂಸ್ಕೃತಿಕ ಕಾರ್ಯಕ್ರಮ



ರಾಯಚೂರು: ನಗರದ ಡ್ಯಾಡಿ ಕಾಲೋನಿ, ಗಣೇಶ ಕಾಲೋನಿಯ ಶ್ರೀ ಈಶ್ವರ ದೇವಸ್ಥಾನದಲ್ಲಿ ಶರನ್ನವರಾತ್ರಿ ಉತ್ಸವದ ಅಂಗವಾಗಿ ನಾಲ್ಕನೇ ದಿನದ ಪುರಾಣ ಪ್ರವಚನ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಶ್ರದ್ಧಾಭಕ್ತಿಯಿಂದ ಆಯೋಜಿಸಲಾಯಿತು.

ದೇವಸ್ಥಾನದ ಅಧ್ಯಕ್ಷರು ಹಾಗೂ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಜಿಲ್ಲಾಧ್ಯಕ್ಷ ಚಂದ್ರಶೇಖರ ಪಾಟೀಲ ಮಿರ್ಜಾಪೂರ ಮತ್ತು ದೇವಸ್ಥಾನದ ಸೇವಾ ಸಮಿತಿಯ ಪದಾಧಿಕಾರಿಗಳ ನೇತೃತ್ವದಲ್ಲಿ ಕಾರ್ಯಕ್ರಮ ವಿಜೃಂಭಣೆಯಿಂದ ಜರುಗಿತು.

ಶರನ್ನವರಾತ್ರಿ ಪ್ರಯುಕ್ತ ಹಮ್ಮಿಕೊಂಡಿದ್ದ ಪುರಾಣ ಪ್ರವಚನದ ನಂತರ ಮಹಿಳೆಯರು ಹಾಗೂ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಶ್ರೀ ಗಣೇಶ ನವಶಕ್ತಿ ನೃತ್ಯಾಲಯದ ಕಲಾವಿದರು ಶಾಂಭವಿ ಮಾತೆಯ ಭಕ್ತಿಗೀತೆಗೆ ಪ್ರಸ್ತುತಪಡಿಸಿದ ಭರತನಾಟ್ಯ ಪ್ರದರ್ಶನವು ನೆರೆದಿದ್ದ ಭಕ್ತರ ಗಮನ ಸೆಳೆಯಿತು. ಕಲಾವಿದರ ನೃತ್ಯಾಭಿನಯಕ್ಕೆ ಭಕ್ತರಿಂದ ಮೆಚ್ಚುಗೆ ವ್ಯಕ್ತವಾಯಿತು.

ಬಳಿಕ ಮಕ್ಕಳು ಹಾಗೂ ಯುವತಿಯರು ಭಕ್ತಿಗೀತೆಗಳು, ವಚನ ಗೀತೆಗಳು ಮತ್ತು ದೇವರ ಸ್ತುತಿಗೆ ಸಂಬಂಧಿಸಿದ ಶ್ಲೋಕಗಳನ್ನು ಪ್ರಸ್ತುತಪಡಿಸುವ ಮೂಲಕ ಕಾರ್ಯಕ್ರಮಕ್ಕೆ ಧಾರ್ಮಿಕ ಮೆರುಗು ನೀಡಿದರು.

ಸಾಂಸ್ಕೃತಿಕ ಕಾರ್ಯಕ್ರಮಗಳ ನಂತರ ಭಕ್ತರಿಗೆ ಮಹಾಪ್ರಸಾದ ವಿತರಿಸಲಾಯಿತು. ಸಾವಿರಾರು ಭಕ್ತರು ಪ್ರಸಾದ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ದೇವಸ್ಥಾನದ ಸೇವಾ ಸಮಿತಿಯ ಪದಾಧಿಕಾರಿಗಳು, ಬಡಾವಣೆಯ ಹಿರಿಯರು, ಮಹಿಳೆಯರು, ಮಕ್ಕಳು ಹಾಗೂ ಸಾವಿರಾರು ಭಕ್ತಾದಿಗಳು ಉಪಸ್ಥಿತರಿದ್ದರು.

## ಬನ್ನಿ ಮಹಾಂಕಾಳಿ ಹಾಗೂ ಗಣೇಶ ದೇವಸ್ಥಾನದಲ್ಲಿ ನವರಾತ್ರೋತ್ಸವದ ವಿಶೇಷ ಪೂಜೆ



ಲಿಂಗಸುಗೂರು: ಪಟ್ಟಣದ 17ನೇ ವಾರ್ಡ್‌ನ ಅಯ್ಯಪ್ಪಸ್ವಾಮಿ ದೇವಸ್ಥಾನದ ಹಿಂಭಾಗದಲ್ಲಿರುವ ಶ್ರೀ ಬನ್ನಿ ಮಹಾಂಕಾಳಿ ಹಾಗೂ ಗಣೇಶ ದೇವಸ್ಥಾನದಲ್ಲಿ ನವರಾತ್ರೋತ್ಸವದ ಅಂಗವಾಗಿ ಮಹಿಳೆಯರು ಪ್ರತಿದಿನ ವಿಶೇಷ ಪೂಜೆ ಸಲ್ಲಿಸುವ ಮೂಲಕ ಹಬ್ಬವನ್ನು ಶ್ರದ್ಧಾಭಕ್ತಿಯಿಂದ ಆಚರಿಸುತ್ತಿದ್ದಾರೆ.

ನವರಾತ್ರೋತ್ಸವದ ಪ್ರಯುಕ್ತ ಪ್ರತಿದಿನ ಬೆಳಗಿನ ಜಾವ ಮಹಿಳೆಯರು ಆಯಾ ದಿನಕ್ಕೆ ನಿಗದಿಪಡಿಸಿದ ಬಣ್ಣದ ಸೀರೆಗಳನ್ನು ಧರಿಸಿ ದೇವಸ್ಥಾನಕ್ಕೆ ಆಗಮಿಸಿ, ದೇವಿಗೆ ವಿಶೇಷ ಪೂಜೆ ಸಲ್ಲಿಸುತ್ತಿದ್ದಾರೆ. ನವರಾತ್ರಿಯ ಒಂಬತ್ತು ದಿನಗಳಿಗೂ ವಿಶೇಷ ಮಹತ್ವವಿದ್ದು, ಮಹಿಳೆಯರು ಸಾಂಪ್ರದಾಯಿಕ ಉಡುಗೆಯಲ್ಲಿ ಪಾಲ್ಗೊಂಡು ಧಾರ್ಮಿಕ ಆಚರಣೆಗಳನ್ನು ನೆರವೇರಿಸುತ್ತಿದ್ದಾರೆ.

ಈ ಕುರಿತು ಬನ್ನಿ ಮಹಾಂಕಾಳಿ ಹಾಗೂ ಗಣೇಶ ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಡಾ. ಚಂದ್ರಶೇಖರ ಪಾಟೀಲ (ಚಂಪಾ) ಮಾತನಾಡಿ, ನವರಾತ್ರೋತ್ಸವದ ಅಂಗವಾಗಿ ಮಹಿಳೆಯರು ಪ್ರತಿದಿನ ಬೆಳಗಿನ ಜಾವ ದೇವಸ್ಥಾನಕ್ಕೆ ಆಗಮಿಸಿ ಭಕ್ತಿಯಿಂದ ವಿಶೇಷ ಪೂಜೆ ಸಲ್ಲಿಸುತ್ತಿದ್ದಾರೆ. ಆಯಾ ದಿನದ ಬಣ್ಣದ ಸೀರೆಗಳನ್ನು ಧರಿಸಿ ಸಂಪ್ರದಾಯದಂತೆ ಪೂಜೆ ನೆರವೇರಿಸುವ ಮೂಲಕ ನವರಾತ್ರಿ ಹಬ್ಬವನ್ನು ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K